ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS
ಪ್ರತಿ ಸುದ್ದಿಯ ಧ್ವನಿ
suryapragathidailynews@gmail.com 9901010100 L2/RNP-1285/TMR/2025-27

Volume: 05 Issue:127 | ಸಂಪುಟ: 05 ಸಂಚಿಕೆ: 127 | Date:04-06-2026 Thursday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಕರ್ನಾಟಕದ 18ನೇ ಮುಖ್ಯಮಂತ್ರಿಯಾಗಿ ಡಿ.ಕೆ ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ; ಅಂಬೇಡ್ಕರ್ ಹೆಸರಿನಲ್ಲಿ ಉಪಮುಖ್ಯಮಂತ್ರಿಯಾಗಿ ಡಾ.ಜಿ.ಪರಮೇಶ್ವರ್ ಪದಗ್ರಹಣ








ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು: ಅರವತ್ತನಾಲ್ಕು ವರ್ಷದ ದೊಡ್ಡಲಹಳ್ಳಿ ಕೆಂಪೇಗೌಡ ಶಿವಕುಮಾರ್ (ಡಿಕೆ ಶಿವಕುಮಾರ್) ಬುಧವಾರ ಕರ್ನಾಟಕದ 18 ನೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಎಂಟು ಬಾರಿ ಶಾಸಕರಾಗಿರುವ ಅವರು, ಇತರ 13 ಹಿರಿಯ ಶಾಸಕರೊಂದಿಗೆ, ಕರ್ನಾಟಕದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಏತನ್ಮಧ್ಯೆ, ಹಿರಿಯ ಕಾಂಗ್ರೆಸ್ ನಾಯಕ ಜಿ ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ನೂರಾರು ಜನರ ಸಮ್ಮುಖದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಶಿವಕುಮಾರ್ ವೀರ ಗಂಗಾಧರ ಅಜ್ಜಯ್ಯ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಪ್ರಮಾಣ ವಚನ ಸ್ವೀಕರಿಸುವ ಮೊದಲು, ಅವರು ನೆರದಿದ್ದವರಿಗೆ ನಮಸ್ಕರಿಸಿ ಅಜ್ಜಯ್ಯ ಅವರಿಗೆ ಪುಷ್ಪ ನಮನ ಸಲ್ಲಿಸಿದರು. ಭಾರತೀಯ ಸಂವಿಧಾನದ ಪ್ರತಿಯನ್ನು ಹಿಡಿದುಕೊಂಡು, ಶಿವಕುಮಾರ್ ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಹಿರಿಯ ಶಾಸಕರಾದ ಕೆ.ಎಚ್. ಮುನಿಯಪ್ಪ, ಕೆ.ಜೆ. ಜಾರ್ಜ್, ಎಂ.ಬಿ. ಪಾಟೀಲ್, ರಾಮಲಿಂಗ ರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ. ಖಾದರ್, ಈಶ್ವರ್ ಖಂಡ್ರೆ, ಡಾ. ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್ ಮತ್ತು ಶರಣ್ ಪ್ರಕಾಶ್ ಪಾಟೀಲ್ ಕೂಡ ಪ್ರಮಾಣ ವಚನ ಸ್ವೀಕರಿಸಿದರು.ಯು.ಟಿ. ಖಾದರ್ ಮತ್ತು ಡಾ. ಯತೀಂದ್ರ ಹೊಸದಾಗಿ ಸೇರ್ಪಡೆಗೊಂಡಿದ್ದರೂ, ಉಳಿದವರು ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದ್ದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಿರ್ಗಮಿತ ಸಿಎಂ ಸಿದ್ದರಾಮಯ್ಯ, ಮಾಜಿ ಸಿಎಂ ವೀರಪ್ಪ ಮೊಯ್ಲಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಕರ್ನಾಟಕ ಉಸ್ತುವಾರಿ) ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಮತ್ತು ರಾಜ್ಯಸಭಾ ಸದಸ್ಯ ಕೆ.ಸಿ. ವೇಣುಗೋಪಾಲ್, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳ ಸಿಎಂ ವಿ.ಡಿ. ಸತೀಶನ್, ಹಿಮಾಚಲ ಪ್ರದೇಶ ಸಿಎಂ ಸುಖವಿಂದರ್ ಸಿಂಗ್ ಸುಖು ಮತ್ತು ಇತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

### ಪರಮೇಶ್ವರ, ಉಪ ಮುಖ್ಯಮಂತ್ರಿ

ದಲಿತ ವರ್ಗದ ಕೋಟಾದಡಿ ಡಾ. ಜಿ. ಪರಮೇಶ್ವರ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಲಾಗಿದೆ. ಪರಮೇಶ್ವರು ಅವರು ಕಾಂಗ್ರೆಸ್‌ನ ವಿಶ್ವಾಸಾರ್ಹ ಸಂಘಟನಾ ವ್ಯಕ್ತಿಯಾಗಿದ್ದು, ಕರ್ನಾಟಕದ ಪ್ರಮುಖ ದಲಿತ ನಾಯಕರದಲ್ಲಿ ಒಬ್ಬರಾಗಿದ್ದಾರೆ. ಪರಮೇಶ್ವರ ಅವರು 8 ಬಾರಿ ಕೆಪಿಸಿಸಿ ಅಧ್ಯಕ್ಷರಾಗಿದ್ದರು. ಹೀಗಾಗಿ ಅವರು ಮುಖ್ಯಮಂತ್ರಿ ಹುದ್ದೆಯ ಪ್ರಮುಖ ಆಕಾಂಕ್ಷಿಯಾಗಿದ್ದರು. ಇದೀಗ ಅವರಿಗೆ ಉಪಮುಖ್ಯಮಂತ್ರಿ ಹುದ್ದೆ ನೀಡಲಾಗಿದೆ.

## ಡಿ.ಕೆ ಶಿವಕುಮಾರ್ ಗೆ ಶುಭ ಕೋರಿದ ಸೋನಿಯಾ ಗಾಂಧಿ



ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಲೋಕಭವನದಲ್ಲಿ ಅಧಿಕಾರ ಸ್ವೀಕರಿಸಲಿರುವ ಡಿ.ಕೆ.ಶಿವಕುಮಾರ್ ಅವರಿಗೆ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಶುಭಾಶಯ ಕೋರಿದ್ದಾರೆ.

ಸೋನಿಯಾ ಗಾಂಧಿ ಅವರು ಬುಧವಾರ ನಿಯೋಜಿತ ಸಿಎಂ ಡಿ ಕೆ ಶಿವಕುಮಾರ್ ಅವರಿಗೆ ದೂರವಾಣಿ ಕರೆ ಮಾಡಿದ್ದು, ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯಿರಿ ಎಂಬ ಸಲಹೆ ಕೊಟ್ಟಿದ್ದಾರೆ ಎನ್ನಲಾಗಿದೆ.

ಕರ್ನಾಟಕವನ್ನು ಯಶಸ್ವಿಯಾಗಿ ಮುನ್ನಡೆಸುತ್ತೀರಿ ಎಂಬ ಅದಮ್ಯ ವಿಶ್ವಾಸ ನನಗಿದೆ. ಹೊಸ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಿ. ಮತ್ತಷ್ಟು ಯಶಸ್ಸು ನಿಮ್ಮದಾಗಲಿ ಎಂದು ಶುಭಾಶಯ ಹೇಳಿದ್ದಾರೆ.

## KPCC ಅಧ್ಯಕ್ಷ ಸ್ಥಾನಕ್ಕೆ CM ಡಿಕೆಶಿ ರಾಜೀನಾಮೆ: ಬಿ.ಕೆ ಹರಿಪ್ರಸಾದ್ ನೂತನ ಸಾರಥಿ;

ಡಿಕೆ ಶಿವಕುಮಾರ್ ಅವರು ಬುಧವಾರ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬೆನ್ನಲ್ಲೇ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಡಿಕೆ ಶಿವಕುಮಾರ್ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ರಾಜೀನಾಮೆ ಪತ್ರವನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜು ಖರ್ಗೆ ಅವರಿಗೆ ರವಾನಿಸಿದ್ದಾರೆ. ಇದರ ಬೆನ್ನಲ್ಲೇ ಮಲ್ಲಿಕಾರ್ಜುನ ಖರ್ಗೆ ಅವರು ಕೆಪಿಸಿಸಿಗೆ ನೂತನ ಸಾರಥಿಯನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

## ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಪ್ರಮಾಣ ವಚನದ ಹೈಲೈಟ್ಸ್

ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆರ್ಥಿಕ ಸಲಹೆಗಾರರಾಗಿ ಎಲ್.ಕೆ ಅತೀಕ್ ನೇಮಕ!

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಆರ್ಥಿಕ ಸಲಹೆಗಾರರನ್ನಾಗಿ ನಿವೃತ್ತ ಐಎಎಸ್ ಅಧಿಕಾರಿ, ಪ್ರಸ್ತುತ 'ಬೆಂಗಳೂರು ಬಿಸಿನೆಸ್ ಕಾರಿಡಾರ್' ಅಧ್ಯಕ್ಷರಾಗಿರುವ ಎಲ್.ಕೆ ಅತೀಕ್ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

## ಡಿ.ಕೆ ಶಿವಕುಮಾರ್ ಗೆ ಪ್ರಧಾನಿ ಮೋದಿ ಅಭಿನಂದನೆ

ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆಗಳು. ಅವರ ಅಧಿಕಾರಾವಧಿಗೆ ಶುಭಾಶಯಗಳು. ಕೇಂದ್ರವು ಕರ್ನಾಟಕ ಸರ್ಕಾರದೊಂದಿಗೆ ಜನರ ಕಲ್ಯಾಣಕ್ಕಾಗಿ ನಿಕಟವಾಗಿ ಕಾರ್ಯನಿರ್ವಹಿಸಲಿದೆ ಎಂದು ಮೋದಿ ಥ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಡಿಕೆಎಸ್ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ನಾರಾಯಣ ಮೂರ್ತಿ, ಅನಿಲ್ ಕುಂಬ್ಳೆ ಸೇರಿದಂತೆ ಗಣ್ಯರು ಭಾಗಿಲೋಕ ಭವನದಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಇನ್ಫೋಸಿಸ್ ಸಹ–ಸಂಸ್ಥಾಪಕ ನಾರಾಯಣ ಮೂರ್ತಿ ಮತ್ತು ಅವರ ಪತ್ನಿ ಹಾಗೂ ರಾಜ್ಯಸಭಾ ಸಂಸದೆ ಸುಧಾ ಮೂರ್ತಿ, ಮಾಜಿ ಕ್ರಿಕೆಟಿಗ ಅನಿಲ್ ಕುಂಬ್ಳೆ, ನಟರಾದ ಜಯಮಾಲಾ ಮತ್ತು ಶಿವರಾಜ್‌ಕುಮಾರ್ ಸೇರಿದಂತೆ ವಿವಿಧ ವಿದೇಶಿ ದೂತಾವಾಸಗಳ ಮುಖ್ಯಸ್ಥರು ಹಾಜರಿದ್ದರು.



# ರಾಜ್ಯದ ಉಪ ಮುಖ್ಯಮಂತ್ರಿಯಾಗಿ ಜಿ.ಪರಮೇಶ್ವರ ಗೋಪ್ಯತಾ ಪ್ರಮಾಣ ಸ್ವೀಕಾರ

## 2ನೇ ಬಾರಿ ಉಪ ಮುಖ್ಯಮಂತ್ರಿಯಾಗಿ ಪರಂ ಪದಗ್ರಹಣ
## ಡಾ. ಬಿ.ಆರ್.ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕಾರ

ಸೂರ್ಯಪ್ರಗತಿನ್ಯೂಸ್.ಕಾಂ

ಕರ್ನಾಟಕ ಕಂಡ ಸಜ್ಜನ ರಾಜಕಾರಣಿ, 2 ಅವಧಿಗೆ ಕೆಪಿಸಿಸಿ ಅಧ್ಯಕ್ಷರಾಗಿ, ಮೂರು ಬಾರಿ ರಾಜ್ಯದ ಗೃಹ ಸಚಿವರಾಗಿ ಮ, ಪ್ರಣಾಳಿಕೆ ಸಮಿತಿ ಅಧ್ಯಕ್ಷರಾಗಿ ಗ್ಯಾರಂಟಿ ಯೋಜನೆಗಳನ್ನು ಪರಿಚಯಿಸಿದ, ಕೊರಟಗೆರೆ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಡಾ. ಜಿ.ಪರಮೇಶ್ವರ ಅವರು ಬೆಂಗಳೂರಿನ ಲೋಕಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ರಾಜ್ಯದ ಉಪ ಮುಖ್ಯಮಂತ್ರಿಗಳಾಗಿ ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಿ.ಆರ್.ಅಂಬೇಡ್ಕರ್ ಅವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.

ಶಿಕ್ಷಣ ಭೀಷ್ಮ ಡಾ. ಎಚ್.ಎಂ.ಗಂಗಾಧರಯ್ಯ ಅವರ ಪುತ್ರರಾಗಿರುವ ಜಿ.ಪರಮೇಶ್ವರ ಅವರು ರಾಜಕೀಯ, ಶಿಕ್ಷಣ, ಕ್ರೀಡೆ, ರಾಜಕೀಯ ಹೀಗೆ ವಿವಿಧ ಕ್ಷೇತ್ರಗಳಲ್ಲಿ ರಾಷ್ಟ್ರಮಟ್ಟದಲ್ಲಿ ಹೆಸರುಗಳಿಸಿ ಜನಾನುರಾಗಿ ನಾಯಕರೆನಿಸಿದ್ದಾರೆ.

ಸಂವಿಧಾನಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಸಮಾನತೆಯ ತತ್ವವನ್ನು ಜೀವನದುದ್ದಕ್ಕೂ ಪಾಲಿಸಿಕೊಂಡು ಬರುತ್ತಿರುವ ಜಿ.ಪರಮೇಶ್ವರ ಅವರು ಸಾರ್ವಜನಿಕ ಜೀವನದಲ್ಲಿ ಅಜಾತಶತ್ರುವೆಂದೇ ಗುರುತಿಸಲ್ಪಟ್ಟು ಅಭಿಮಾನಿಗಳಿಂದ ಸವ್ಯಸಾಚಿ ಎಂಬ ಬಿರುದಿಗೆ ಪಾತ್ರರಾಗಿದ್ದಾರೆ.

ತುಮಕೂರು ಜಿಲ್ಲೆಯ ಗೊಲ್ಲಹಳ್ಳಿಯಲ್ಲಿ 1951ರ ಆಗಸ್ಟ್ 6ರಂದು ಡಾ. ಹೆಚ್.ಎಂ.ಗಂಗಾಧರಯ್ಯ ಮತ್ತು ಗಂಗಮಾಳಮ್ಮ ದಂಪತಿಯ ದ್ವಿತೀಯ ಪುತ್ರರಾಗಿ ಜನಿಸಿದರು. ತಂದೆ ಹೆಚ್.ಎಂ.ಗಂಗಾಧರಯ್ಯ ಅವರು ಚಿತ್ರ ಕಲಾ ಶಿಕ್ಷಕರು. ಮೂಲತಃ ಕೃಷಿ ಕುಟುಂಬದ ಹಿನ್ನೆಲೆಯವರಾಗಿದ್ದಾರೆ. ಮೇಷ್ಟ್ರು ಮಗ ಆಗಿರುವ ಪರಮೇಶ್ವರ ಅವರು ಜೀವನದಲ್ಲಿ ಶಿಸ್ತಿನ ಸಿಪಾಯಿ.

ತುಮಕೂರಿನ ಗೊಲ್ಲಹಳ್ಳಿಯ ಸರ್ಕಾರಿ ಶಾಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮುಗಿಸಿದರು. ಬಳಿಕ ಕೃಷಿ ವಿಜ್ಞಾನದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಎಂ.ಎಸ್ಸಿ ಸ್ನಾತಕೋತ್ತರ ಪದವಿ ಪಡೆದುಕೊಂಡಿದ್ದಾರೆ. 1984ರಲ್ಲಿ ಆಸ್ಟ್ರೇಲಿಯಾದ ವೈಟ್ ಅಗ್ರಿಕಲ್ಚರ್ ರೀಸರ್ಚ್ ಇನ್ಸಿಟ್ಯೂಟ್ ಯೂನಿವರ್ಸಿಟಿ ಆಫ್ ಅಡಿಲೆಡ್‌ನಿಂದ ಪಿ.ಎಚ್‌ಡಿ ಪದವಿಗಳಿಸಿದವರು.

### ರಾಜೀವ್ ಗಾಂಧಿ ಮಾರ್ಗದರ್ಶನ:–



ಮಾಜಿ ಪ್ರಧಾನಿ ಭಾರತರತ್ನ ದಿವಂಗತ ರಾಜೀವ್ ಗಾಂಧಿ ಅವರ ಕರೆಗೆ ಓಗೊಟ್ಟು ರಾಜಕೀಯ ಪ್ರವೇಶ ಮಾಡಿದರು. ದೂರದೃಷ್ಟಿಯ ಯುವಕರು ರಾಜಕೀಯಕ್ಕೆ ಬರಬೇಕು. ಉತ್ತಮ ಆಡಳಿತ ನೀಡಬೇಕೆಂದು ಭಾರತದ ಪ್ರಧಾನಿಯಾಗಿದ್ದ ಅವರು ನೀಡಿದ್ದ ರಾಜಕೀಯ ಕರೆಗೆ ಓಗೊಟ್ಟು ರಾಜಕೀಯ ಪ್ರವೇಶ ಮಾಡಿದ ಪರಮೇಶ್ವರ ಅವರು, 1989ರಲ್ಲಿ ಮೊದಲ ಬಾರಿಗೆ ಮಧುಗಿರಿ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದರು.

ಮೊದಲ ಬಾರಿ ಶಾಸಕರಾಗಿದ್ದ ಅವಧಿಯಲ್ಲೇ ವೀರಪ್ಪ ಮೊಯ್ಲಿ ಸರ್ಕಾರದ ಸಚಿವ ಸಂಪುಟದಲ್ಲಿ ಮಂತ್ರಿ ಸ್ಥಾನ ಪಡೆದರು. 1999 ಮತ್ತು 2004ರ ವಿಧಾನಸಭಾ ಚುನಾವಣೆಯಲ್ಲಿ ಮಧುಗಿರಿ ವಿಧಾನಸಭಾ ಕ್ಷೇತ್ರದಿಂದ ಪುನಾರಾಯ್ಕೆಯಾದರು. ಎಸ್.ಎಂ.ಕೃಷ್ಣ ಸಂಪುಟದಲ್ಲಿ ಉನ್ನತ ಶಿಕ್ಷಣ, ವಾರ್ತಾ ಖಾತೆ ಸಚಿವರಾಗಿ ಕಾರ್ಯನಿರ್ವಹಿಸಿದರು. ಕ್ಷೇತ್ರ ಪುನರ್ವಿಂಗಡಣೆಯಾದ ಬಳಿಕ, 2008ರಲ್ಲಿ ಕೊರಟಗೆರೆ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಶಾಸಕರಾಗಿ ಆಯ್ಕೆಯಾದರು. 2018ರಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಒಕ್ಕೂಟದ ಮೈತ್ರಿ ಸರ್ಕಾರದಲ್ಲಿ ಉಪಮುಖ್ಯಮಂತ್ರಿಯಾಗಿ, 2023ರಿಂದ 2026ರವರೆಗೆ ಗೃಹ ಖಾತೆಯನ್ನು ನಿಭಾಯಿಸಿದ್ದಾರೆ.

**ಅಕ್ಷರವೇ ಅಸ್ತ್ರ:–** 1958ರಲ್ಲಿ ರಾಜ್ಯದ ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಕಾಗೋಡುವಿನಲ್ಲಿ ಭೂದಾನ ಚಳುವಳಿ ಆರಂಭವಾಗಿತ್ತು. ಇದೇ ವೇಳೆಗೆ ಸರಿಯಾಗಿ ಸರ್ವೋದಯದ ನೇತಾರರಾಗಿದ್ದ



ವಿನೋಬಾಭಾವೆಯುವರು ಆರಂಭಿಸಿದ ಚಳುವಳಿ ದೇಶದೆಲ್ಲೆಡೆ ಸಂಚರಿಸಿ ತುಮಕೂರಿಗೆ ಬಂದಾಗ ಸುಮಾರು 200 ಮಂದಿ ತಂಡ ಗೊಲ್ಲಹಳ್ಳಿಯ ಗಂಗಾಧರಯ್ಯನವರ ಮನೆಯಲ್ಲಿ ವಾಸ್ತವ್ಯ ಹೂಡಿತ್ತು. ಕಾಕಾತಾಳೀಯ ಎನ್ನುವಂತೆ ವಿನೋಬಾ ಅವರ ಸಾಮಾಜಿಕ ಕಳಕಳಿ ಮತ್ತು ಬದ್ಧತೆಯ ಸಂದೇಶವನ್ನು ಸ್ವೀಕರಿಸಿದ ಶಿಕ್ಷಣ ಭೀಷ್ಮ ಹೆಚ್.ಎಂ.ಗಂಗಾಧರಯ್ಯನವರು, ದುರ್ಬಲ ವರ್ಗದ ಎಲ್ಲ ಮಕ್ಕಳಿಗೆ ಶಿಕ್ಷಣ ನೀಡುವ ಬಗ್ಗೆ ಚಿಂತಿಸತೊಡಗಿದರು. ಆ ಚಿಂತನೆಯ ಸಾಕಾರ ರೂಪಕವೇ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆ. 1959ರಲ್ಲಿ ಉಚಿತ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆ ಆರಂಭಿಸಿದರು. ಗೊಲ್ಲಹಳ್ಳಿಯಲ್ಲಿ ಅದೇ ವರ್ಷ ಜೂನ್ ತಿಂಗಳಲ್ಲಿ ಡಾ. ಶಿವಕುಮಾರಸ್ವಾಮಿಗಳಿಂದ ಶ್ರೀ ಸಿದ್ಧಾರ್ಥ ಪ್ರೌಢಶಾಲೆಗೆ ಚಾಲನೆ ದೊರೆಯಿತು. ಮೂವತ್ತೈದು ವಿದ್ಯಾರ್ಥಿಗಳಿಂದ ಪ್ರಾರಂಭವಾದ ಈ ಪ್ರೌಢ ಶಾಲೆ ರಾಜ್ಯಾದ್ಯಂತ ಕವಲುಗಳಾಗಿ ಟಿಸಿಲೊಡೆದು ರಾಜ್ಯದ ಮೂಲೆಮೂಲೆಗಳಲ್ಲಿ ಶಿಕ್ಷಣದ ಕಂಪು ಪಸರಿಸುತ್ತಿದೆ. ಇದೀಗ ಸ್ವತಂತ್ರ ವಿಶ್ವವಿದ್ಯಾನಿಲಯವಾಗುವ ಮಟ್ಟಕ್ಕೆ ಬೆಳೆದಿದೆ.

**2 ಅವಧಿಗೆ ಕೆಪಿಸಿಸಿ ಅಧ್ಯಕ್ಷರು:–** ಡಾ. ಜಿ.ಪರಮೇಶ್ವರ ಅವರು, 2010ರಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ನೇಮಕಗೊಂಡು ಸುಧೀರ್ಘ ಎರಡು ಅವಧಿಗೆ ಪಕ್ಷ ಸಂಘಟಿಸಿದ ಕೀರ್ತಿ ಇವರದ್ದು. ರಾಜ್ಯದಲ್ಲೆಡೆ ಸುತ್ತಿ ಪಕ್ಷ ಸಂಘಟಿಸಿದರು. 'ಮನೆಮನೆಗೆ ಕಾಂಗ್ರೆಸ್' ಅಭಿಯಾನದ ಮೂಲಕ 2013ರಲ್ಲಿ ಕಾಂಗ್ರೆಸ್ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರುವಲ್ಲಿ ಪ್ರಮುಖ ಕಾರಣಕರ್ತರು. 2018ರಲ್ಲಿ ಉಪಮುಖ್ಯಮಂತ್ರಿಗಳಾಗುವ ಮೂಲಕ ಕರ್ನಾಟಕದ 8ನೇ ಡಿಸಿಎಂ ಆಗಿ ಕಾರ್ಯನಿರ್ವಹಣೆ ಮಾಡಿದರು. ಮೂರು ಬಾರಿ ಗೃಹ ಸಚಿವರಾದ ಹೆಗ್ಗಳಿಕೆಯು ಇವರದ್ದಾಗಿದ್ದು, ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗಾಗಿ 'ಪೊಲೀಸ್ ಗೃಹ ಯೋಜನೆ' ಮೂಲಕ ಸುಸಜ್ಜಿತ ಮನೆಗಳನ್ನು ಕಲ್ಪಿಸಿದರು. ಪೊಲೀಸ್ ಇಲಾಖೆಯನ್ನು ತಾಂತ್ರಿಕವಾಗಿ ಬಲಪಡಿಸುವ ನಿಟ್ಟಿನಲ್ಲಿ ಸುಧಾರಣೆಗೆ ಪಾತ್ರ ವಹಿಸಿದ್ದಾರೆ.

### ಕ್ರೀಡೆಯಲ್ಲೂ ಸಾಧನೆ:–

ಡಾ. ಜಿ.ಪರಮೇಶ್ವರ ಅವರು ಬಹಳ ಕ್ರಿಯಾಶೀಲರು. ವಿದ್ಯಾರ್ಥಿ ಜೀವನದಲ್ಲಿಯೇ ಎನ್‌ಸಿಸಿ ಸೇರ್ಪಡೆಯಾಗಿದ್ದರು. ಅಲ್ಲದೇ, ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆದಿದ್ದ 100 ಮೀಟರ್ ಓಟದ ಸ್ಪರ್ಧೆಯಲ್ಲಿ ಭಾಗವಹಿಸಿ 10.9 ಸೆಕೆಂಡ್‌ಗಳಲ್ಲಿ ಓಟವನ್ನು ಪೂರ್ಣಗೊಳಿಸಿ ದಾಖಲೆ ಬರೆದಿದ್ದರು. ಅಂತರ್ ಕಾಲೇಜು, ಅಂತರ್ ವಿಶ್ವವಿದ್ಯಾಲಯ ಕ್ರೀಡಾಕೂಟಗಳಲ್ಲಿಯೂ ಭಾಗವಹಿಸಿದ್ದರು. ಗಾಂಧಿ ಕೃಷಿ ವಿಜ್ಞಾನ ಕೇಂದ್ರ ಕಾಲೇಜಿನ (ಜಿಕೆವಿಕೆ) ಪ್ರತಿನಿಧಿಯಾಗಿ ರಾಷ್ಟ್ರಮಟ್ಟದಲ್ಲಿ ಭಾಗವಹಿಸಿದ್ದರು.

**ಮನೆಮನೆಗೆ ಕಾಂಗ್ರೆಸ್:–** ಜಿ.ಪರಮೇಶ್ವರ ಅವರು ಎರಡು ಅವಧಿಗೆ ಕೆಪಿಸಿಸಿ ಅಧ್ಯಕ್ಷರಾಗಿ 8 ವರ್ಷಗಳವರೆಗೆ ಸುಧೀರ್ಘವಾಗಿ ಸೇವೆ ಸಲ್ಲಿಸಿದ್ದಾರೆ. 2010ರಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಜವಾಬ್ದಾರಿ ವಹಿಸಿಕೊಂಡ ಬಳಿಕ 'ಮನೆಮನೆಗೆ ಕಾಂಗ್ರೆಸ್' ಅಭಿಯಾನದ ಮೂಲಕ ಕಾಂಗ್ರೆಸ್ ಪಕ್ಷವನ್ನು ಬೇರುಮಟ್ಟದಿಂದ ಬಲಪಡಿಸುವ ಕೆಲಸಕ್ಕೆ ಕೈಹಾಕಿದರು. ಬಿ.ಎಸ್.ಯಡಿಯೂರಪ್ಪ ನೇತೃತ್ವದ ಬಿಜೆಪಿ ಸರ್ಕಾರದ ಸಾಲುಸಾಲು ಹಗರಣಗಳು, ದುರಾಡಳಿತ, ಭ್ರಷ್ಟಚಾರದ ವಿರುದ್ಧ ಗಟ್ಟಿ ಧ್ವನಿ ಎತ್ತಿದ್ದರು. ಅಂದಿನ ಬಿಜೆಪಿ ಸರ್ಕಾರದ ವೈಫಲ್ಯಗಳು, ದುರಾಳಿಡತವನ್ನು ಜನರಿಗೆ ಮನದಟ್ಟು ಮಾಡುವಲ್ಲಿ ಯಶಸ್ವಿಯಾದರು. 2013ರ ವಿಧಾನಸಭಾ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಡಾ. ಜಿ.ಪರಮೇಶ್ವರ ಅವರು ಮಹತ್ವದ ಪಾತ್ರ ವಹಿಸಿದ್ದರು.

**ಗ್ಯಾರಂಟಿ ಯೋಜನೆಗಳ ಪರಿಚಯ:–** 2023ರ ರಾಜ್ಯ ವಿಧಾನಸಭಾ ಚುನಾವಣೆಯ ಪ್ರಣಾಳಿಕೆ ಸಮಿತಿಯ ಅಧ್ಯಕ್ಷರನ್ನಾಗಿ ಕಾಂಗ್ರೆಸ್ ಪಕ್ಷವು ಜವಾಬ್ದಾರಿ ವಹಿಸಿತು. ಮಹಿಳಾ ಸಬಲೀಕರಣ ನಿಟ್ಟಿನಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಪರಿಚಯಿಸಿದರು. ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ ರವರ ನೇತೃತ್ವದ ಸರ್ಕಾರ ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ದೇಶದೆಲ್ಲೆಡೆ ಮನೆ ಮಾತಾಯಿತು.

### ಗೃಹ ಇಲಾಖೆ ದೇಶದಲ್ಲೇ ನಂಬರ್ ಒನ್:–

ಇಂಡಿಯಾ ಜಸ್ಟೀಸ್ ರಿಪೋರ್ಟ್ (India Justice Report) ಭಾರತದಲ್ಲಿ ನ್ಯಾಯ ಒದಗಿಸುವ ವ್ಯವಸ್ಥೆ (ಪೊಲೀಸ್, ಜೈಲು, ನ್ಯಾಯಾಂಗ ಮತ್ತು ಕಾನೂನು ನೆರವು) ಹೇಗಿದೆ ಎಂದು ಮೌಲ್ಯಮಾಪನ ಮಾಡುವ ಒಂದು ಪ್ರಮುಖ ರಾಷ್ಟ್ರೀಯ ವರದಿಯಾಗಿದೆ. ಇದರ ಪ್ರಕಾರ ಪೊಲೀಸ್ ವ್ಯವಸ್ಥೆ, ಕಾರಾಗೃಹಗಳು (ಜೈಲು), ನ್ಯಾಯಾಂಗ, ಮತ್ತು ನ್ಯಾಯದಾನದಲ್ಲಿ ದೇಶದಲ್ಲೇ ಕರ್ನಾಟವು ಅಗ್ರಸ್ಥಾನದಲ್ಲಿದೆ. ಇದರ ಹೆಗ್ಗಳಿಕೆ 2023ರಿಂದ 2026ರ ಮೇ ತಿಂಗಳವರೆಗೆ ಗೃಹ ಸಚಿವರಾಗಿ ಇಲಾಖೆಯನ್ನು ಉತ್ತಮವಾಗಿ ಜವಾಬ್ದಾರಿಯನ್ನು ನಿಭಾಯಿಸಿದ ಡಾ. ಜಿ.ಪರಮೇಶ್ವರ ಅವರಿಗೆ ಸಲ್ಲುತ್ತದೆ. ಪೊಲೀಸ್ ವ್ಯವಸ್ಥೆಯನ್ನು ಜನಸ್ನೇಹಿಗೊಳಿಸುವ ನಿಟ್ಟಿನಲ್ಲಿ "ಮನೆಮನೆಗೆ ಪೊಲೀಸ್" ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

### ಡ್ರಗ್ಸ್ ವಿರುದ್ಧ ಸಮರ:–

ಯುವ ಪೀಳಿಗೆಯ ಭವಿಷ್ಯವನ್ನು ಸರ್ವನಾಶ ಮಾಡುತ್ತಿರುವ ಮಾದಕ ದ್ರವ್ಯ ಹಾವಳಿ ವಿರುದ್ಧ ಸಮರ ಸಾರಿದ್ದಾರೆ. ಡ್ರಗ್ಸ್ ಮುಕ್ತ ಕರ್ನಾಟಕ ನಿರ್ಮಾಣ ಮಾಡುವುದಾಗಿ ಪಣ ತೊಟ್ಟಿರುವ ಡಾ. ಜಿ.ಪರಮೇಶ್ವರ ಅವರು, ಡ್ರಗ್ಸ್ ದಂಧೆಯನ್ನು ಬೇರು ಮಟ್ಟದಿಂದ ಸಂಪೂರ್ಣವಾಗಿ ನಾಶ ಪಡಿಸುವ ನಿಟ್ಟಿನಲ್ಲಿ ಕಠಿಣ ಕ್ರಮಗಳನ್ನು ಕೈಗೊಂಡಿದ್ದಾರೆ. ನೂರಾರು ಪ್ರಕರಣಗಳಲ್ಲಿ ಕೋಟ್ಯಂತರ ರೂ. ಮೌಲ್ಯದ ಡ್ರಗ್ಸ್ ಪತ್ತೆ ಹಚ್ಚುವ ಮೂಲಕ ಡ್ರಗ್ಸ್ ದಂಧೆಕೋರರಿಗೆ ಬಿಸಿ ಮುಟ್ಟಿಸಿದ್ದಾರೆ. ಅಲ್ಲದೇ, ಅಮಾಯಕರ ಬ್ಯಾಂಕ್ ಖಾತೆಗಳಿಗೆ ಕನ್ನ ಹಾಕುತ್ತಿರುವ ಸೈಬರ್ ವಂಚಕರ ಕಠಿಣ ಕ್ರಮ ತೆಗೆದುಕೊಂಡಿದ್ದಾರೆ.

### ಸೈಬರ್ ಕಮಾಂಡ್ ಸೆಂಟರ್ ಸ್ಥಾಪನೆ:–

ದೇಶದಲ್ಲೇ ಮೊಟ್ಟ ಮೊದಲ ಸೈಬರ್ ಕ್ರೈಂ ಪೊಲೀಸ್ ಠಾಣೆಯನ್ನು ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದೆ. ಪರಮೇಶ್ವರ ಅವರು 2023ರಲ್ಲಿ ಗೃಹ ಖಾತೆ ವಹಿಸಿಕೊಂಡ ಬಳಿಕ ಸೈಬರ್ ಕಮಾಂಡ್ ಸೆಂಟರ್ ಸ್ಥಾಪಿಸಿ, ಡಿಜಿಪಿ ಶ್ರೇಣಿಯ ಐಪಿಎಸ್ ಅಧಿಕಾರಿಯನ್ನು ನೇಮಿಸಿದ್ದಾರೆ.

### ನೇಮಕಾತಿಯಲ್ಲಿ ಪಾರದರ್ಶಕತೆ:–

ದೇಶದಲ್ಲೇ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ನೇಮಕಾತಿಯಲ್ಲಿ ತನ್ನದೇ ಛಾಪು ಹೊಂದಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ 545 ಪಿಎಸ್‌ಐ ಹುದ್ದೆಗಳ ನೇಮಕಾತಿಯಲ್ಲಿ ನಡೆದ ಬಹುದೊಡ್ಡ ಹಗರಣದಿಂದ ಕಳಂಕ ಅಂಟಿಕೊಂಡಿತ್ತು. ಕಾಂಗ್ರೆಸ್ ಪಕ್ಷವು ಹೋರಾಟದ ಮೂಲಕ ಪಿಎಸ್‌ಐ ನೇಮಕಾತಿ ಹಗರಣವನ್ನು ಬಯಲು ಮಾಡಿತ್ತು. ಆಕಾಂಕ್ಷಿಗಳಿಗೆ ಆಗಿದ್ದ ಅನ್ಯಾಯವನ್ನು ತಡೆದರು. ತದನಂತರ ಅಧಿಕಾರಕ್ಕೆ ಬಂದ ಬಳಿಕ ಗೃಹ ಸಚಿವರಾಗಿ 545 ಮತ್ತು 402 ಪಿಎಸ್‌ಐ ಹುದ್ದೆಗಳ ನೇಮಕಾತಿಯನ್ನು ಪರಮೇಶ್ವರ ಅವರು ಪಾರದರ್ಶಕವಾಗಿ ನಡೆಸಿದರು.

ತಮ್ಮ ಇಡೀ ರಾಜಕೀಯ ಜೀವನದಲ್ಲಿ ಪ್ರಾಮಾಣಿಕತೆ, ಪಕ್ಷ ನಿಷ್ಠೆ, ಕಳಂಕ ರಹಿತ ಮತ್ತು ಪಾರದರ್ಶಕ ಆಡಳಿತವನ್ನು ಮೈಗೂಡಿಸಿಕೊಂಡಿರುವ ಜಿ.ಪರಮೇಶ್ವರ ಅವರ ಸೌಮ್ಯ ಸ್ವಭಾವದ ನಾಯಕತ್ವ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ಹಾಗೂ ಎಐಸಿಸಿ ವರಿಷ್ಠರಿಗೆ ಮೆಚ್ಚುಗೆ. ಆಡಂಬರ, ಅಬ್ಬರ, ಪ್ರಚಾರದಿಂದ ಸದಾ ದೂರ ಇರುವ ನಾಯಕ. ಪಕ್ಷ ವಹಿಸಿದ ಎಲ್ಲ ಜವಾಬ್ದಾರಿಗಳನ್ನು ಚಾಚು ತಪ್ಪದೆ, ಅಚ್ಚುಕಟ್ಟಾಗಿ ಯಶಸ್ವಿಯಾಗಿ ನಿಭಾಯಿಸುವ ಛಾಪು ಇವರದ್ದು.

**ಮಹಿಳಾ ಸುರಕ್ಷತೆಗೆ ಬೆಂಗಳೂರು ಟಾಪ್ ಸಿಟಿ:–** ಚೆನ್ನೈ ಮೂಲದ ಅವತಾರ್ ಗ್ರೂಪ್ ಸಂಸ್ಥೆಯು ಇತ್ತೀಚೆಗೆ 'ಭಾರತದಲ್ಲಿ ಮಹಿಳೆಯರಿಗಾಗಿ ಅತ್ಯುತ್ತಮ ನಗರಗಳು' (Top Cities for Women in India) ನಡೆಸಿದ ಸಮೀಕ್ಷೆಯಲ್ಲಿ ಬೆಂಗಳೂರು ನಗರ ದೇಶದಲ್ಲೇ ಪ್ರಥಮ ಸ್ಥಾನ ಪಡೆದಿದೆ. ಮಹಿಳಾ ಸುರಕ್ಷತೆ, ಗುಣಮಟ್ಟದ ಜೀವನ ಮತ್ತು ಮಹಿಳಾ ಉದ್ಯೋಗಾವಕಾಶಗಳಲ್ಲಿ ನಗರವು ಅಗ್ರಸ್ಥಾನದಲ್ಲಿದೆ. ಸೇಫ್ ಸಿಟಿ (Safe City) ಯೋಜನೆಯಡಿ ಸ್ಥಾಪಿಸಲಾದ ಕಮಾಂಡ್ ಸೆಂಟರ್ ಮೂಲಕ ಬೆಂಗಳೂರು ನಗರದಲ್ಲಿ ಸೇಫ್ಟಿ ಐಲ್ಯಾಂಡ್, ಉನ್ನತ ಗುಣಮಟ್ಟದ ಸಿಸಿಟಿವಿ ಕ್ಯಾಮೆರಾಗಳ ನಿಗಾವಹಿಸಲಾಗುತ್ತಿದೆ.

### ರಾಜಕೀಯದಲ್ಲಿ ಎಲ್ಲವೂ ದಾಖಲೆ:–

ಸತತ 2ನೇ ಅವಧಿಗೆ ಕೆಪಿಸಿಸಿ ಅಧ್ಯಕ್ಷರಾಗಿ 8 ವರ್ಷ ಸುದೀರ್ಘವಾಗಿ ಪಕ್ಷ ಸಂಘಟನೆಯ ಜವಾಬ್ದಾರಿಯನ್ನು ಹೊತ್ತು, 2013ರಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಪ್ರಮುಖ ಕಾರಣಕರ್ತರು. 3 ಬಾರಿ ರಾಜ್ಯದ ಗೃಹ ಖಾತೆಯನ್ನು ಉತ್ತಮವಾಗಿ ನಿಭಾಯಿಸಿದ ಖ್ಯಾತಿ ಇವರಿಗೆ ಇದೆ. 2ನೇ ಸಲ ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ.

### ಪರಮೇಶ್ವರ ಅವರ ರಾಜಕೀಯ ಹೆಜ್ಜೆ ಗುರುತು:–

1992ರಲ್ಲಿ ವೀರಪ್ಪ ಮೊಯ್ಲಿ ನೇತೃತ್ವದ ಸರ್ಕಾರದಲ್ಲಿ ರೇಷ್ಮೆ ಖಾತೆ ಸಚಿವರು.1999 ರಿಂದ 2004ರವರೆಗೆ ಎಸ್.ಎಂ.ಕೃಷ್ಣ ಸರ್ಕಾರದಲ್ಲಿ ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ, ವಾರ್ತಾ ಮತ್ತು ಪ್ರಚಾರ ಖಾತೆ ನಿರ್ವಹಣೆ.

2010 ರಿಂದ 2018ರವರೆಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಸುದೀರ್ಘವಾಗಿ ಪಕ್ಷ ಸಂಘಟನೆಯ ಜವಾಬ್ದಾರಿ ಹೊತ್ತಿದ್ದರು. 2015ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆ. ವಿಧಾನ ಪರಿಷತ್ ಸಭಾ ನಾಯಕರಾಗಿ 2015ರಲ್ಲಿ ಮೊದಲ ಬಾರಿಗೆ ಗೃಹ ಖಾತೆಯ ಜವಾಬ್ದಾರಿಯನ್ನು ನಿಭಾಯಿಸಿದರು.

2018 ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ಉಪ ಮುಖ್ಯಮಂತ್ರಿಗಳಾಗಿ ಕಾರ್ಯನಿರ್ವಹಣೆ. ರಾಜ್ಯ ಗೃಹ ಇಲಾಖೆ ಮತ್ತು ಬೆಂಗಳೂರು ನಗರಾಭಿವೃದ್ಧಿ ಜವಾಬ್ದಾರಿ ನಿಭಾಯಿಸಿದ್ದರು. 2023ರ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕೆಪಿಸಿಸಿ ಚುನಾವಣಾ ಪ್ರಣಾಳಿಕೆ ಸಮಿತಿ ಅಧ್ಯಕ್ಷರಾಗಿ, ಪಂಚ ಗ್ಯಾರಂಟಿ ಯೋಜನೆಗಳನ್ನು ಪರಿಚಯಿಸಿದರು. ಗ್ಯಾರಂಟಿ ಯೋಜನೆಗಳು ದೇಶದೆಲ್ಲೆಡೆ ಮನೆ ಮಾತಾಗಿವೆ.

2023ರಲ್ಲಿ ಸಿದ್ದರಾಮಯ್ಯ ಸಂಪುಟದಲ್ಲಿ ಗೃಹ ಸಚಿವರಾಗಿ ಖಾತೆಯನ್ನು ಅಚ್ಚುಕಟ್ಟಾಗಿ ನಿಭಾಯಿಸುವ ಮೂಲಕ ಜನರ ಮೆಚ್ಚುಗೆ.

ಒಟ್ಟು ಆರು ಬಾರಿ ಶಾಸಕರಾಗಿ ಜಿ.ಪರಮೇಶ್ವರ ಆಯ್ಕೆ:–
ಮಧುಗಿರಿ ವಿಧಾನಸಭಾ ಕ್ಷೇತ್ರ (ಮೂರು ಬಾರಿ ಗೆಲುವು)



1) 1989 – ಮೊದಲ ಬಾರಿ ಶಾಸಕರಾಗಿ ಆಯ್ಕೆ
2) 1999– ಎರಡನೇ ಬಾರಿ ದಾಖಲೆಯ ಮತಗಳ ಅಂತರದಿಂದ ಗೆಲುವು
3) 2004– ಮೂರನೇ ಬಾರಿ ಮಧುಗಿರಿಯಿಂದ ಶಾಸಕರಾಗಿ ಆಯ್ಕೆ

ಕೊರಟಗೆರೆ ವಿಧಾನಸಭಾ ಕ್ಷೇತ್ರ (ಮೂರು ಬಾರಿ ಗೆಲುವು):–
4) 2008– ಕ್ಷೇತ್ರ ಮರುವಿಂಗಡಣೆಯ ನಂತರ ಕೊರಟಗೆರೆಯಿಂದ ಮೊದಲ ಬಾರಿ ಗೆಲುವು
5) 2018– ಕೊರಟಗೆರೆಯಿಂದ ಎರಡನೇ ಬಾರಿ ಶಾಸಕರಾಗಿ ಆಯ್ಕೆ
6) 2023– ಕೊರಟಗೆರೆ ವಿಧಾನಸಭಾ ಕ್ಷೇತ್ರದಿಂದ ಮೂರನೇ ಬಾರಿ ಗೆಲುವು

2016ರಲ್ಲಿ ವಿಧಾನ ಪರಿಷತ್ ಸದಸ್ಯರಾಗಿ ಮತ್ತು ವಿಧಾನ ಪರಿಷತ್ ಸಭಾ ನಾಯಕರಾಗಿ ಆಯ್ಕೆಯಾಗಿ ರಾಜಕೀಯ ಜೀವನ ನಡೆಸಿದ್ದಾರೆ ಮುಂದಿನ ದಿನಗಳು ಇಂತಹ ನಾಯಕನಿಗೆ ಮುಖ್ಯಮಂತ್ರಿ ಪಟ್ಟ ದೊರೆಯಲಿ ಎಂಬುದು ನಾಡಿನ ಸಮಸ್ತರ ಆಶಯವಾಗಿದೆ.

– ಸಾಗರ್ ವೆಂಕಣ್ಣ



ರಾಜ್ಯದ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಜನ ನಾಯಕ, ಸಾವ್ಯಸಾಚಿ ಡಾ.ಜಿ.ಪರಮೇಶ್ವರ್ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು ಮುಂದಿನ ದಿನಗಳಲ್ಲಿ ರಾಜ್ಯದ ಮುಖ್ಯಮಂತ್ರಿ ಸ್ಥಾನ ದೊರೆಯಲಿ ಎಂಬ ಶುಭಹಾರೈಕೆಗಳೊಂದಿಗೆ ಅಭಿನಂದನೆಗಳು
ಶುಭ ಕೋರುವವರು
ಸಂಪಾದಕರು ಸೂರ್ಯಪ್ರಗತಿ ದಿನಪತ್ರಿಕೆ











ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ರಾಮನಗರ ಸುದ್ದಿ ಕಾರ್ನರ್

## ಡಿಕೆಶಿ ಸಿಎಂ : ಬಿಳಗುಂಬ ಗ್ರಾಮದಲ್ಲಿ ಸಿಹಿ ವಿತರಿಸಿ ಸಂಭ್ರಮ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಡಿ.ಕೆ.ಶಿವಕುಮಾರ್ ಅವರು ರಾಜ್ಯದ 24ನೇ ಮುಖ್ಯಮಂತ್ರಿ ಆಗಿ ಬುಧವಾರ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆ ವಿವಿಧೆಡೆ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳಿಂದ ವಿಜಯೋತ್ಸವ, ದೇವಾಲಯಗಳಲ್ಲಿ ವಿಶೇಷ ಪೂಜೆ, ಸಿಹಿ ವಿತರಣೆ ಕಾರ್ಯಕ್ರಮಗಳು ನಡೆದವು.

ತಾಲ್ಲೂಕಿನ ಬಿಳಗುಂಬ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಬಸವೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಗ್ರಾಮಸ್ಥರಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಯುವ ಕಾಂಗ್ರೆಸ್ ಘಟಕದ ಪ್ರಧಾನ ಕಾರ್ಯದರ್ಶಿ ಸಂತೋಷ್ ಆರ್ ಬಿಳಗುಂಬ ಅವರು, ಯುವ ಕಾರ್ಯಕರ್ತರಾದ ನಮ್ಮೆಲ್ಲರ ಆಸೆ ಇಂದು ಈಡೇರಿದೆ. 40 ವರ್ಷಗಳಿಂದ ಪಕ್ಷಕ್ಕಾಗಿ ನಿಸ್ವಾರ್ಥವಾಗಿ ದುಡಿದ ನೆಚ್ಚಿನ ನಾಯಕ ಡಿ.ಕೆ.ಶಿವಕುಮಾರ್ ಅವರು ಇಂದು ಮುಖ್ಯಮಂತ್ರಿಯಾಗಿದ್ದಾರೆ. ಪಕ್ಷದ ಈ ನಡೆ ಕಾಂಗ್ರೆಸ್‌ನಲ್ಲಿ ಲಕ್ಷಾಂತರ ನಿಷ್ಠಾವಂತ ಕಾರ್ಯಕರ್ತರನ್ನು ಸೃಷ್ಟಿಸಲಿದೆ ಎಂದರು.



ಡಿ.ಕೆ.ಶಿವಕುಮಾರ್ ಹಾದಿಯಲ್ಲೇ ಮುಂದೆ ಪಕ್ಷವನ್ನು ಯುವ ಕಾರ್ಯಕರ್ತರು ಸಂಘಟಿಸಲಿದ್ದಾರೆ.

ಆಡಳಿತದಲ್ಲಿ ಯಾವುದೇ ವಿಘ್ನಗಳು ಎದುರಾಗದಿರಲಿ ಎಂದು ಗ್ರಾಮದ ಬಸವೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದೇವೆ. ಇಂದಿನಿಂದ ಬೆಂಗಳೂರು ದಕ್ಷಿಣ ಜಿಲ್ಲೆಯ ಅಭಿವೃದ್ಧಿಗೆ ಈಗ ಮತ್ತಷ್ಟು ವೇಗ ದೊರೆಯಲಿದೆ. ಜನ ನಮ್ಮ ನಾಯಕರ ಮೇಲೆ ಇಟ್ಟಿರುವ ಎಲ್ಲ ಭರವಸೆಗಳನ್ನು ಈಡೇರಿಸಲಿದ್ದಾರೆ ಎಂದು ಆಶಯ ವ್ಯಕ್ತಪಡಿಸಿದರು.

ಜಿಲ್ಲೆಯ ನಾಲ್ಕೂ ಕ್ಷೇತ್ರಗಳಲ್ಲಿ ವಸತಿ, ನಿವೇಶನ ರಹಿತ ಬಡವರಿಗೆ ಶೀಘ್ರದಲ್ಲೆ ನಿವೇಶನ ದೊರೆಯಲಿದೆ. ಜಿಲ್ಲೆಗೆ ಇನ್ನೂ ಹೆಚ್ಚಿನ ಅನುದಾನ ದೊರೆಯಲಿದೆ. ಶಿವಕುಮಾರ್ ಅವರು ಸಿಎಂ ಆಗುತ್ತಿರುವುದು ಜಿಲ್ಲೆಯ ಜನರಲ್ಲಿ ಸಂತಸ ಮೂಡಿಸಿದೆ. ಹೀಗಾಗಿ ಬಿಳಗುಂಬ ಗ್ರಾಮಸ್ಥರಿಗೆ ಸಿಹಿ ವಿತರಿಸಿ ಸಂಭ್ರಮಿಸುತ್ತಿದ್ದೇವೆ ಎಂದರು.

ಈ ವೇಳೆ ಪರಿಸರ ಪ್ರೇಮಿ ಬಿ.ಟಿ.ರಾಜೇಂದ್ರ, ಮಿಥುನ್, ಗ್ರಾಪಂ ಮಾಜಿ ಅಧ್ಯಕ್ಷರಾದ ನವೀನ್ ಗೌಡ, ಶಿವಲಿಂಗ, ಹಿರಿಯ ಮುಖಂಡರಾದ ಬಿ.ವಿ.ರಾಜೇಂದ್ರ, ಮಲ್ಲಿಕಾರ್ಜುನ್, ವಿಷಕಂಠು ಮತ್ತಿತರರು ಇದ್ದರು.

ರಾಮನಗರ ಜಿಲ್ಲೆಯ ಎಲ್ಲಾ ತಾಲ್ಲೂಕು ಹಾಗೂ ವಿಶೇಷ ಸುದ್ದಿಗಾಗಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
ಬಿಡದಿ ಮಹೇಶ್ : ವರದಿಗಾರರರು 99728 34055

## ಕಾಂಗ್ರೆಸ್ ಕಾರ್ಯಕರ್ತರಿಂದ ಸಂಭ್ರಮಾಚರಣೆ



ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಬೆಂಗಳೂರಿನ ಲೋಕಭವನದಲ್ಲಿ ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸುತ್ತಿದ್ದಂತೆಯೇ ರಾಮನಗರದ ಐಜೂರು ಸರ್ಕಲ್‌ನಲ್ಲಿ ನಗರಸಭಾ ಮಾಜಿ ಉಪಾಧ್ಯಕ್ಷೆ ಮಂಗಳಾ ಶಂಭುಗೌಡ ನೇತೃತ್ವದಲ್ಲಿ ಬುಧವಾರ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.ಕಾಂಗ್ರೆಸ್ ಮುಖಂಡ ಶಂಭುಗೌಡ ಮಾತನಾಡಿ ಇಂದು ನಮಗೆ ಸಂಭ್ರಮ ಸಡಗರದ ದಿನ ನಮ್ಮ ನಾಯಕರು ನಮ್ಮ ಜಿಲ್ಲೆಯ ನಿಜವಾದ ಮಣ್ಣಿನ ಮಗ ರಾಜ್ಯದ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಬೆಂಗಳೂರಿನ ಲೋಕಭವನದಲ್ಲಿ ರಾಜ್ಯಪಾಲರ ಸಮ್ಮುಖದಲ್ಲಿ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಡಿ.ಕೆ.ಶಿವಕುಮಾರ್ ಅವರನ್ನು ಜಿಲ್ಲೆ ಮತ್ತು ರಾಜ್ಯದ ಜನರು ಮರೆಯಲಾರರು.

ಐಜೂರು ವೃತ್ತದಲ್ಲಿ ಸುಮಾರು 40 ಅಡಿ ಡಿ.ಕೆ.ಶಿವಕುಮಾರ್ ಅವರ ಕಟೌಟ್‌ನ್ನು ಅವರು ಮುಖ್ಯಮಂತ್ರಿ ಆಗುವ ಒಂದು ವಾರಗಳ ಮೊದಲೇ ನಿಲ್ಲಿಸಿದ್ದೇವೆ ಎಂದರು.

ನಗರಸಭೆ ಮಾಜಿ ಅಧ್ಯಕ್ಷೆ ಬಿ.ಸಿ. ಪಾರ್ವತಮ್ಮ ಮಾತನಾಡಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯಾದ್ಯಂತ ಜನರಿಗೆ ಕಲ್ಯಾಣ ಕಾರ್ಯಕ್ರಮಗಳನ್ನು ತಾವು ಉಪ ಮುಖ್ಯಮಂತ್ರಿಗಳಾಗಿದ್ದಾಗ ನೀಡಿರುವುದರ ಜೊತೆಗೆ ಕಾಂಗ್ರೆಸ್ ಪಕ್ಷವನ್ನು ಸಂಘಟಿಸುತ್ತಾ ಮುಖ್ಯಮಂತ್ರಿಯಾಗಬೇಕೆಂಬ ಛಲದಿಂದ ಹೋರಾಟ ಮಾಡಿಕೊಂಡು ಬಂದವರು ಈ ದಿನ ಅವರ ಆಸೆ ಪೂರೈಸಿದೆ ನಮ್ಮಗಳ ಆಸೆಯೂ ನೆರವೇರಿದೆ ಮುಂದೆ ಜಿಲ್ಲೆ ಮತ್ತಷ್ಟು ಅಭಿವೃದ್ಧಿ ಅವರ ಆಡಳಿತದಲ್ಲಿ ಕಾಣಲಿದೆ ಎಂದರು.

ನಗರಸಭಾ ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಮಾಜಿ ಅಧ್ಯಕ್ಷೆ ವಿಜಯಕುಮಾರಿ, ಮುಖಂಡರಾದ ಮಂಜುಳಾ ಮರಿದೇವರು, ಗೀತಾ, ಮಹದೇವಮ್ಮ, ಲೀಲಾವತಿ, ಶಿವಲಿಂಗಪ್ಪ, ಷಣ್ಮುಗ, ಸಮದ್, ವೆಂಕಟೇಶ್, ರಂಗಸ್ವಾಮಿ ಗೊಲ್ಲರದೊಡ್ಡಿ, ಮಹಾಲಿಂಗ ಸೇರಿದಂತೆ ಹಲವರು ಇದ್ದರು.

## ಡಿಕೆಶಿ ಸಿಎಂ : ಮುಸ್ಲಿಂ ಬಾಂಧವರಿಂದ ಜನಪರ ಆಡಳಿತ ನೀಡಲೆಂದು ವಿಶೇಷ ಪ್ರಾರ್ಥನೆ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಸುಸೂತ್ರವಾಗಿ ಉತ್ತಮ ಆಡಳಿತ ನೀಡಲೆಂದು ಮುಸ್ಲಿಂ ಬಾಂಧವರು ದರ್ಗಾದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಇಲ್ಲಿನ ಪೀರನ್ ಷಾ ವಲಿ ದರ್ಗಾದಲ್ಲಿ ನಗರಸಭೆ ಸದಸ್ಯ ಅಬ್ದುಲ್ ಸಮದ್ ಮತ್ತು ಯುವ ಮುಖಂಡ ಮಹಮ್ಮದ್ ಅಲಿಂ ನೇತೃತ್ವದಲ್ಲಿ ಮುಸ್ಲಿಂ ಬಾಂಧವರು ಡಿಕೆಶಿಗೆ ಒಳಿತಾಗಲೆಂದು ವಿಶೇಷ ಪ್ರಾರ್ಥನೆ ಸಲ್ಲಿಸಿದರು. ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರಕ್ಕೂ ಮುನ್ನ ಅಲ್ಪಸಂಖ್ಯಾತ ಬಾಂಧವರು ಪಕ್ಷಬೇಧ ಮರೆತು ಪೂಜೆ ಸಲ್ಲಿಸಿ ಡಿ. ಕೆ. ಶಿವಕುಮಾರ್ ರವರು ಸುಸೂತ್ರವಾಗಿ ಮತ್ತು ಜನಪರ ಆಡಳಿತ ನೀಡಲೆಂದು ಹಾರೈಸಿ ಪುಷ್ಪಾರ್ಚನೆ ಮಾಡಿದರಲ್ಲದೆ ಸಿಹಿ ಹಂಚಿ ಅಭಿಮಾನ ಮೆರೆದರು.

ಈ ವೇಳೆ ನಗರಸಭೆ ಸದಸ್ಯ ಅಬ್ದುಲ್ ಸಮದ್ ಮಾತನಾಡಿ, ನಾಲ್ಕು ದಶಕಗಳಿಂದಲೂ ಕಾಂಗ್ರೆಸ್ ಸಂಘಟನೆಗಾಗಿ ದುಡಿಯುತ್ತಿರುವ ಶಿವಕುಮಾರ್, ಪಕ್ಷದ ಶಿಸ್ತಿನ ಸಿಪಾಯಿಯೂ ಹೌದು. ಪಕ್ಷದ ಟ್ರಬಲ್ ಶೂಟರ್, ಆಪತ್ಬಾಂಧವ ಕೂಡ ಆಗಿದ್ದಾರೆ. ಕಷ್ಟಪಟ್ಟು ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ. ಅವರು ಮುಖ್ಯಮಂತ್ರಿಯಾಗುವ ಅವಕಾಶ ಒದಗಿಬಂದಿರುವುದು ನಮಗೆ ಸೇರಿದಂತೆ ಎಲ್ಲಾ ಸಮುದಾಯದವರಿಗೂ ಖುಷಿಯ ವಿಷಯ. ಹೀಗಾಗಿ ಅವರ ಆಡಳಿತ ಅವಧಿಯಲ್ಲಿ ಯಾವುದೇ ವಿಘ್ನಗಳು ಎದುರಾಗದಂತೆ ಪ್ರಾರ್ಥಿಸಿ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ನೆರವೇರಿಸಲಾಗಿದೆ ಎಂದರು.



ಈ ಜಿಲ್ಲೆಯ ಹೆಮ್ಮೆಯ ಪುತ್ರ, ಅಭಿವೃದ್ಧಿಯ ಹರಿಕಾರ ಡಿ.ಕೆ.ಶಿವಕುಮಾರ್ ನಾಡಿನ ಮುಖ್ಯಮಂತ್ರಿ ಆಗಿರುವುದು ಸಂತಸ ತಂದಿದೆ. ಡಿಕೆಶಿರವರು ರಾಜ್ಯದ ಅಭಿವೃದ್ಧಿಯತ್ತ ಗಮನ ಹರಿಸಬೇಕು. ಆ ಮೂಲಕ ತಮ್ಮ ಆಡಳಿತದ ಅವಧಿಯಲ್ಲಿ ಹೊಸ ದಾಖಲೆ ಬರೆಯಬೇಕು. ಜೊತೆಗೆ ಬೆಂಗಳೂರು ದಕ್ಷಿಣ ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ವಿಶೇಷ ಒತ್ತು ನೀಡುತ್ತಾರೆಂಬ ವಿಶ್ವಾಸವಿದೆ ಎಂದು ತಿಳಿಸಿದರು.

ಯುವ ಕಾಂಗ್ರೆಸ್ ಮುಖಂಡ ಮಹಮ್ಮದ್ ಅಲಿಂ ಮಾತನಾಡಿ, ಶುಭ ದಿನದಂದು ಡಿಕೆಶಿರವರು ಮುಖ್ಯಮಂತ್ರಿ ಆಗಿ ಅಧಿಕಾರ ಸ್ವೀಕಾರ ಮಾಡುತ್ತಿದ್ದಾರೆ. ಅವರು ನಿರ್ವಿಘ್ನವಾಗಿ ಒಳ್ಳೆಯ ಆಡಳಿತ ನೀಡಲೆಂದು ಹಾಗೂ ಮುಂದೆಯೂ ಅವರೇ ಸಿಎಂ ಆಗಲೆಂದು ಪ್ರಾರ್ಥನೆ ಸಲ್ಲಿಸಿರುವುದಾಗಿ ಹೇಳಿದರು.

ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಡಿಕೆಶಿ ಶ್ರಮಿಸಿದರು. ಅವರ ನಿಷ್ಠೆಗೆ ಪಕ್ಷದ ವರಿಷ್ಠರು ಮುಖ್ಯಮಂತ್ರಿ ಹುದ್ದೆಯನ್ನು ಉಡುಗೊರೆಯಾಗಿ ನೀಡಿದ್ದಾರೆ. ಕೆಂಗಲ್ ಹನುಮಂತಯ್ಯ ಮತ್ತು ಎಸ್. ಎಂ. ಕೃಷ್ಣ ಅವರಂತೆ ಜನಪರ ಆಡಳಿತ ನೀಡಿ ರಾಜ್ಯವನ್ನು ಮತ್ತಷ್ಟು ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ದರ್ಗಾ ಹಜರತ್ ಪೀರನ್ ಷಾ ವಲಿ ಕಮಿಟಿ ಕಾರ್ಯದರ್ಶಿ ಸಯದ್ ಲಿಯಾಕತ್ ಮಾತನಾಡಿ, ಡಿಕೆಶಿ ನಾಡಿದ ನಾಯಕರಾಗಿ ಪ್ರಮಾಣ ವಚನ ಸ್ವೀಕಾರ ಮಾಡುತ್ತಿರುವುದು ಸಂತಸದ ಸಂಗತಿ. ಡಿಕೆಶಿರವರು ಅನೇಕ ಬಾರಿ ದರ್ಗಾಕ್ಕೆ ಭೇಟಿ ನೀಡಿದ್ದಾರೆ. ಪೀರನ್ ಷಾ ವಲಿರವರ ಆಶೀರ್ವಾದ ಡಿಕೆಶಿ ಮೇಲೆ ಸದಾ ಇರಲಿದೆ ಎಂದು ಹೇಳಿದರು.ಕಾಂಗ್ರೆಸ್ ಮುಖಂಡರಾದ ಅಬ್ದುಲ್ ಜಬಿ, ಜಲೀಲ್, ಉಸ್ಮಾನ್, ವಸೀಂ, ಅಸ್ಲಾಂ, ಶಫಿಕ್, ದರ್ಗಾ ಹಜರತ್ ಪೀರನ್ ಷಾ ವಲಿ ಕಮಿಟಿ ಅಧ್ಯಕ್ಷ ಅಜ್ಮತುಲ್ಲಾ ಖಾನ್, ಉಪಾಧ್ಯಕ್ಷ ಮುಸ್ತಾಕ್ ಅಹಮದ್, ಜಫ್ರುಲ್ಲಾ ಖಾನ್, ಅಯಾಜ್ ಖಾನ್, ಹುರ್ಮತ್ ಬೇಗ್, ಶಹಬಾಜ್ ಖಾನ್ ಮತ್ತಿತರರು ಹಾಜರಿದ್ದರು.


IN THE COURT OF THE CIVIL JUDGE, AND JMFC MADHUGIRI

O.S.NO. 147 /2025

PLAINTIFF: Sri. Ranganatha s/o KuriRangappa Aged about 45 years, residing at Chambenahalli village, Dodderi hobli Madhugiri taluk.

v/s

DEFENDANT: 1) Sri. Ranghashamaiah s/o late KuriRangappa Aged about 72 years, residing at r/o No. 2, Jothinagara Ward No. 2 Santhepete Sira town, Sira taluk. Chambenahalli village, Dodderi hobli Madhugiri taluk.

2) Keshava M.S. s/o Siddappa No. 2, Jothi Nagara Ward No. 2, Santhepete Sira town, Sira taluk.

DRAFT PAPER PUBLICATION

That the above named plaintiff has filed the above suit for partition and separate possession in respect of the suit properties, You being the proposed defendants inspite of taking sufficient steps against you through court, you have avoid to receive notices issued by the said court, hence you are hereby inform to appear before this court on personally or through an advocate. If you are unable to appear the hon'ble court you will be placed exparte and case will be proceeded against you.Given under my hand the seal of the court of this day At Madhugiri

By order of the court
CMO
Prl. Civil judge Judge Madhugiri

Advocate for appellant.
S.Raghuantha Reddy. B.A.LL.B.
Advocate 22nd ward Raghavendara coloney
Madhugiri town.







## ಇದು ಕೇವಲ ಜವಾಬ್ದಾರಿಯಲ್ಲ, ಕನ್ನಡಿಗರ ಕನಸು ನನಸು ಮಾಡುವ ಪವಿತ್ರ ಕರ್ತವ್ಯ: ಸಿಎಂ ಡಿಕೆಶಿ ಭಾವುಕ ಪೋಸ್ಟ್!

ಬೆಂಗಳೂರು: "ಜನರಿಂದ, ಜನರಿಗಾಗಿ, ಜನರಿಗೋಸ್ಕರ" ಎಂಬ ಪ್ರಜಾಪ್ರಭುತ್ವದ ಆಶಯದೊಂದಿಗೆ ಆಡಳಿತದ ಸಾರಥ್ಯ ವಹಿಸಿಕೊಂಡಿರುವ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲೋಕಭವನದಲ್ಲಿ ಪ್ರಮಾಣವಚನ ಸ್ವೀಕರಿಸಿದ ನಂತರ ನಾಡಿನ ಜನತೆಯನ್ನುದ್ದೇಶಿಸಿ ಅತ್ಯಂತ ಆಪ್ತ ಹಾಗೂ ಭಾವುಕ ನುಡಿಗಳನ್ನಾಡಿದ್ದಾರೆ.

ತಮ್ಮ ರಾಜಕೀಯ ಏಳುಬೀಳುಗಳಲ್ಲಿ ಜೊತೆಯಾಗಿ ನಿಂತ ಕೋಟ್ಯಂತರ ಕನ್ನಡಿಗರಿಗೆ ಮತ್ತು ಕಾರ್ಯಕರ್ತರಿಗೆ ಅವರು ತಲೆಬಾಗಿ ಧನ್ಯವಾದ ಅರ್ಪಿಸಿದ್ದಾರೆ.

ನನ್ನನ್ನು ಹೆಗಲ ಮೇಲೆ ಹೊತ್ತು ಮುನ್ನಡೆಸಿದ ಜನತೆಗೆ ಧನ್ಯವಾದ

ತಮ್ಮ ರಾಜಕೀಯ ಪಯಣದ ಹಾದಿಯನ್ನು ಸ್ಮರಿಸಿರುವ ಡಿ.ಕೆ. ಶಿವಕುಮಾರ್, "ನನ್ನ ಬದುಕಿನ ಪ್ರತಿಯೊಂದು ಏಳುಬೀಳುಗಳಲ್ಲೂ ಧೈರ್ಯ ತುಂಬಿ, ನನ್ನನ್ನು ಹೆಗಲ ಮೇಲೆ ಹೊತ್ತು ಮುನ್ನಡೆಸಿದ ನನ್ನ ಪ್ರೀತಿಯ ಕರ್ನಾಟಕದ ಕೋಟ್ಯಂತರ ಜನತೆ ಹಾಗೂ ಕಾರ್ಯಕರ್ತ ಬಂಧುಗಳ ಆಶೀರ್ವಾದದಿಂದ ಲೋಕಭವನದಲ್ಲಿ ಇಂದು ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದೆ. ಈ ಕ್ಷಣದಲ್ಲಿ ನಾನು ನಿಮ್ಮೆಲ್ಲರ ಪ್ರೀತಿ ಹಾಗೂ ವಿಶ್ವಾಸಕ್ಕೆ ತಲೆಬಾಗುತ್ತೇನೆ" ಎಂದು ವಿನೀತರಾಗಿದ್ದಾರೆ.



ಇದು ಕನ್ನಡಿಗರ ಕನಸುಗಳನ್ನು ನನಸು ಮಾಡುವ ಪವಿತ್ರ ಕರ್ತವ್ಯ

ಮುಖ್ಯಮಂತ್ರಿ ಹುದ್ದೆಯನ್ನು ಕೇವಲ ಅಧಿಕಾರವಾಗಿ ನೋಡದೆ, ಅದೊಂದು ಪವಿತ್ರ ಜವಾಬ್ದಾರಿ ಎಂದು ಕರೆದಿರುವ ಅವರು, "ಇಂದು ನನ್ನ ಹೆಗಲ ಮೇಲಿರುವುದು ಕೇವಲ ಮುಖ್ಯಮಂತ್ರಿಯ ಜವಾಬ್ದಾರಿಯಲ್ಲ, ಬದಲಿಗೆ ಕೋಟ್ಯಂತರ ಕನ್ನಡಿಗರ ಕನಸುಗಳನ್ನು ನನಸು ಮಾಡುವ ಪವಿತ್ರ ಕರ್ತವ್ಯ. ಈ ಅವಕಾಶವನ್ನು ನನಗೆ ಕರುಣಿಸಿದ ಹಿರಿಯರಿಗೆ, ಮಾರ್ಗದರ್ಶಕರಿಗೆ ಹಾಗೂ ನನ್ನ ಶಕ್ತಿಯಾಗಿ ನಿಂತ ಪ್ರತಿಯೊಬ್ಬರಿಗೂ ನನ್ನ ಹೃದಯಪೂರ್ವಕ ಕೃತಜ್ಞತೆಗಳು" ಎಂದು ಪಕ್ಷದ ಹಿರಿಯರಿಗೆ ಹಾಗೂ ಬೆಂಬಲಿಗರಿಗೆ ಧನ್ಯವಾದ ಸಲ್ಲಿಸಿದ್ದಾರೆ.

ತಂತ್ರಜ್ಞಾನ ಯುಗದಲ್ಲಿ ಕರ್ನಾಟಕವನ್ನು ಶಿಖರಕ್ಕೆ ಕೊಂಡೊಯ್ಯುವ ಸಂಕಲ್ಪ

ಅಭಿವೃದ್ಧಿಯ ದೂರದೃಷ್ಟಿಯ ಬಗ್ಗೆ ಮಾತನಾಡಿದ ಮುಖ್ಯಮಂತ್ರಿಗಳು, "ವೇಗವಾಗಿ ಬದಲಾಗುತ್ತಿರುವ ಇಂದಿನ ತಂತ್ರಜ್ಞಾನದ ಯುಗದಲ್ಲಿ, ಹೊಸ ಆಲೋಚನೆಗಳೊಂದಿಗೆ ನಮ್ಮ ಹೆಮ್ಮೆಯ ಕರ್ನಾಟಕವನ್ನು ಅಭಿವೃದ್ಧಿಯ ಅತ್ಯುನ್ನತ ಶಿಖರಕ್ಕೆ ಕೊಂಡೊಯ್ಯಬೇಕಿದೆ. ಈ ಸರ್ವತೋಮುಖ ಪ್ರಗತಿಯ ದಾರಿಯಲ್ಲಿ ರೈತರು, ಶ್ರಮಿಕರು, ಮಹಿಳೆಯರು, ವಿದ್ಯಾರ್ಥಿಗಳು, ಯುವಜನರು ಹಾಗೂ ಪ್ರತಿಯೊಬ್ಬ ನಾಗರಿಕರ ಸಹಭಾಗಿತ್ವ ನಮಗೆ ಮುಖ್ಯ" ಎಂದು ಸಮಾಜದ ಎಲ್ಲಾ ವರ್ಗಗಳ ಒಟ್ಟಾರೆ ವಿಕಾಸಕ್ಕೆ ಒತ್ತು ನೀಡಿದ್ದಾರೆ.

ಸಮೃದ್ಧ ಕರ್ನಾಟಕ ಕಟ್ಟಲು ಎಲ್ಲರ ಸಹಕಾರಕ್ಕೆ ಕರೆ

ಒಗ್ಗಟ್ಟಿನ ಮಂತ್ರ ಜಪಿಸಿರುವ ಸಿಎಂ ಡಿಕೆಶಿ, "ಯಾವುದೇ ಒಬ್ಬ ವ್ಯಕ್ತಿಯಿಂದ ಬದಲಾವಣೆ ಸಾಧ್ಯವಿಲ್ಲ, ಆದರೆ ನಾವೆಲ್ಲರೂ ಕೈಜೋಡಿಸಿದರೆ ಅಸಾಧ್ಯವಾದುದು ಯಾವುದೂ ಇಲ್ಲ. ಬನ್ನಿ, ನಮ್ಮ ಭವಿಷ್ಯದ ಪೀಳಿಗೆ ಹೆಮ್ಮೆ ಪಡುವಂತಹ ಸುಂದರ, ಸಮೃದ್ಧ ಮತ್ತು ಪ್ರಗತಿಪರ ಕರ್ನಾಟಕವನ್ನು ಕಟ್ಟೋಣ. ಜೈ ಹಿಂದ್, ಜೈ ಕರ್ನಾಟಕ!" ಎಂದು ಕರೆಯಿಡುವ ಮೂಲಕ ತಮ್ಮ ಸಂದೇಶವನ್ನು ಮುಕ್ತಾಯಗೊಳಿಸಿದ್ದಾರೆ.

## ತುಮಕೂರಿನಲ್ಲಿಂದು ಕಾಲೇಜು ವಿಭಾಗ ಮಟ್ಟದ ನಾಟಕೋತ್ಸವ: ರಾಧೆಯ ಮತ್ತು ವಾಲಿವಧೆ ಎರಡು ಪ್ರಸಿದ್ಧ ನಾಟಕಗಳ ಪ್ರದರ್ಶನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಹಾಗೂ ತುಮಕೂರಿನ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್ಮೆಂಟ್ ಇವುಗಳ ಜಂಟಿ ಆಶ್ರಯದಲ್ಲಿ ಇಂದು ನಗರದಲ್ಲಿ ವಿಭಾಗ ಮಟ್ಟದ ಕಾಲೇಜು ನಾಟಕೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಈ ಕಲಾತ್ಮಕ ಸಮಾರಂಭದಲ್ಲಿ ಎರಡು ಅದ್ಭುತ ನಾಟಕಗಳು ರಂಗದ ಮೇಲೆ ಪ್ರದರ್ಶನಗೊಳ್ಳಲಿವೆ.

ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್ಮೆಂಟ್, ಕಾಲೇಜು ಸಭಾಂಗಣ,ಬಿ.ಹೆಚ್. ರಸ್ತೆ, ಟೌನ್ ಹಾಲ್ ಹತ್ತಿರ, ತುಮಕೂರು ಇಲ್ಲಿ ಗುರುವಾರ ಬೆಳಗ್ಗೆ 10:00 ಗಂಟೆಗೆ ಈ ರಂಗ ಉತ್ಸವವನ್ನು ಕೇಂದ್ರ ಸಂಗೀತ ಮತ್ತು ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಡಾ. ಲಕ್ಷ್ಮಣ ದಾಸ್ ಅವರು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನನ್ಯ ಇನ್ಸ್ಟಿಟ್ಯೂಟ್‌ನ ಅಧ್ಯಕ್ಷರಾದ ಶ್ರೀ ಸಿ.ಎನ್.ಎಸ್. ವಿಶ್ವನಾಥ್ ಅವರು ವಹಿಸಲಿದ್ದಾರೆ.




ಮುಖ್ಯ ಅತಿಥಿಗಳಾಗಿ ಉಗಮ ಶ್ರೀನಿವಾಸ (ಸದಸ್ಯರು, ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು) ರವಿಕುಮಾರ್ ಸಿ.ಹೆಚ್ (ಸಂಪಾದಕರು, ಸೂರ್ಯಪ್ರಗತಿ ಕನ್ನಡ ದಿನ ಪತ್ರಿಕೆ, ತುಮಕೂರು) ಡಾ. ಹರೀಶ್ ಹೆಚ್. (ಟ್ರಸ್ಟಿಗಳು, ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್ಮೆಂಟ್)

ಗೌರವಾನ್ವಿತ ಉಪಸ್ಥಿತಿಯನ್ನು ಕಾಂತರಾಜು ಕೌತಮಾರನಹಳ್ಳಿ (ರಂಗಸಂಘಟಕರು, ತುಮಕೂರು) ಅವರು ವಹಿಸಲಿದ್ದಾರೆ

ಈ ಭವ್ಯ ನಾಟಕೋತ್ಸವಕ್ಕೆ ರಂಗಾಸಕ್ತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕರ್ನಾಟಕ ನಾಟಕ ಅಕಾಡೆಮಿಯ ಸದಸ್ಯ ಸಂಚಾಲಕರಾದ ರವೀಂದ್ರನಾಥ್ ಸಿರಿವರ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಪ್ರಾಮಾಣಿಕವಾಗಿ, ನಿಷ್ಠೆ ಮತ್ತು ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಿಸಿ – ಶಾಸಕ ಸಿ.ಬಿ.ಸುರೇಶ್‌ಬಾಬು

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ:-ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳ ಪೌಷ್ಟಿಕತೆ, ಆರೋಗ್ಯ, ಶಿಕ್ಷಣ ಹಾಗೂ ಮಹಿಳಾ ಸಬಲೀಕರಣದ ಕ್ಷೇತ್ರದಲ್ಲಿ ಮಹತ್ವದ ಪಾತ್ರವಹಿಸಿಲಿದ್ದು ನಿಮ್ಮ ಕರ್ತವ್ಯವನ್ನು ಪ್ರಮಾಣಿಕವಾಗಿ ನಿಷ್ಠೆ ಮತ್ತು ಸೇವಾ ಮನೋಭಾವದಿಂದ ಕರ್ತವ್ಯ ನಿರ್ವಹಿಸಿ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಸ್ತ್ರೀ ಶಕ್ತಿ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನೂತನವಾಗಿ ಆಯ್ಕೆಯಾದ ಅಂಗನವಾಡಿ ಕಾರ್ಯಕರ್ತೆಯರಿಗಾಗಿ ಆಯೋಜಿಸಲಾದ ತರಬೇತಿ ಮತ್ತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಂತೆ ತಿಳಿಸಿದ ಅವರು ನಿಮಗೆ ಕೊಟ್ಟಿರುವಂತಹ ಕರ್ತವ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸಿ, ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳ ಪೌಷ್ಟಿಕತೆ, ಆರೋಗ್ಯ, ಶಿಕ್ಷಣ ಹಾಗೂ ಮಹಿಳಾ ಸಬಲೀಕರಣದ ಕ್ಷೇತ್ರದಲ್ಲಿ ವಹಿಸುವ ಮಹತ್ವದ ಪಾತ್ರದ ಕುರಿತು ತಿಳಿಸಲಾಯಿತು. ತಮ್ಮ ಕರ್ತವ್ಯಗಳನ್ನು ಪ್ರಾಮಾಣಿಕತೆ, ನಿಷ್ಠೆ ಮತ್ತು ಸೇವಾ ಮನೋಭಾವದಿಂದ ನಿರ್ವಹಿಸಿ, ಎಂದ ಅವರು ನೂತನವಾಗಿ ಆಯ್ಕೆಯಾದ ಎಲ್ಲ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾರ್ದಿಕ ಶುಭಾಶಯಗನ್ನು ತಿಳಿಸಿ ನಿಮ್ಮ ಸೇವಾ ಅವಧಿ ಯಶಸ್ವಿಯಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಡಿಪಿಓ, ಹೊನ್ನಪ್ಪನವರು ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳೊಂದಿಗೆ ಯಾವ ರೀತಿ ನಡೆದುಕೊಳ್ಳಬೇಕು ಮತ್ತು ದಾಖಲೆಗಳನ್ನು ಯಾವರೀತಿ ನಿರ್ವಹಿಸಬೇಕು ಎಂಬುದನ್ನು ತಿಳಿಸಿದ ಅವರು ಕರ್ತವ್ಯದ ಅವಧಿಯಲ್ಲಿ ಸಾರ್ವಜನಿಕರೊಂದಿಗೆ ಅಧಿಕಾರಿಗಳೊಂದಿಗೆ ಯಾವ ರೀತಿ ವರ್ತಿಸಬೇಕು ಎಂಬುದನ್ನು ತಿಳಿಸಿದರು.





# ಸಿಎಂ ಡಿಕೆಶಿ ಮೊದಲ ಕ್ಯಾಬಿನೆಟ್ ಬಿಗ್ ಗಿಫ್ಟ್: ವಿದ್ಯಾರ್ಥಿಗಳಿಗೆ ಫ್ರೀ ಬಸ್ ಪಾಸ್ ಸೇರಿದಂತೆ 6 ಮಹತ್ವದ ಘೋಷಣೆ!

ಸೂರ್ಯಪ್ರಗತಿ ನ್ಯೂಸ್.ಕಾಂ



ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಜವಾಬ್ದಾರಿ ವಹಿಸಿಕೊಂಡಿರುವ ಡಿ.ಕೆ. ಶಿವಕುಮಾರ್ ಅವರು ಮೊದಲ ದಿನವೇ ಆಡಳಿತದಲ್ಲಿ ಮುನ್ನುಗ್ಗಿದ್ದಾರೆ. ಇಂದು ನಡೆದ ತಮ್ಮ ಮೊದಲ ಸಚಿವ ಸಂಪುಟ ಸಭೆಯಲ್ಲಿ ವಿದ್ಯಾರ್ಥಿಗಳು, ನಿರುದ್ಯೋಗಿ ಯುವಕರು ಹಾಗೂ ಆಸ್ತಿ ಮಾಲೀಕರ ಹಿತದೃಷ್ಟಿಯಿಂದ ಅತ್ಯಂತ ಪ್ರಮುಖವಾದ 6 ಮಹತ್ವದ ಘೋಷಣೆಗಳನ್ನು ಮಾಡುವ ಮೂಲಕ ರಾಜ್ಯದ ಜನತೆಗೆ ಬಂಪರ್ ಗಿಫ್ಟ್ ನೀಡಿದ್ದಾರೆ.

ಮುಖ್ಯಮಂತ್ರಿಗಳ ಈ ಐತಿಹಾಸಿಕ ಮೊದಲ ಸಚಿವ ಸಂಪುಟ ಸಭೆಯ ನಿರ್ಧಾರಗಳ ಸಂಪೂರ್ಣ ವಿವರ ಇಲ್ಲಿದೆ:

1. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್! ರಾಜ್ಯದ ಬಡ ಹಾಗೂ ಮಧ್ಯಮ ವರ್ಗದ ವಿದ್ಯಾರ್ಥಿಗಳಿಗೆ ನೆರವಾಗುವ ನಿಟ್ಟಿನಲ್ಲಿ ಸರ್ಕಾರ ಅತ್ಯಂತ ಮಹತ್ವದ ನಿರ್ಧಾರ ಕೈಗೊಂಡಿದೆ. 2. ಬಿ-ಖಾತಾದಿಂದ ಎ-ಖಾತಾ ಯೋಜನೆ ಇಡೀ ರಾಜ್ಯಕ್ಕೆ ವಿಸ್ತರಣೆ

ಇದುವರೆಗೆ ಕೇವಲ ರಾಜಧಾನಿ ಬೆಂಗಳೂರಿಗಷ್ಟೇ ಸೀಮಿತವಾಗಿದ್ದ 'ಬಿ-ಖಾತಾದಿಂದ ಎ-ಖಾತಾ' ಪರಿವರ್ತನೆ ಮಾಡುವ ಯೋಜನೆಯನ್ನು ಈಗ ಇಡೀ ಕರ್ನಾಟಕ ರಾಜ್ಯಾದ್ಯಂತ ವಿಸ್ತರಿಸುವುದಾಗಿ ಸಿಎಂ ಘೋಷಿಸಿದ್ದಾರೆ. ಈ ಮೂಲಕ ರಾಜ್ಯದ ಎಲ್ಲಾ ನಗರ ಮತ್ತು ಪಟ್ಟಣ ಪ್ರದೇಶಗಳ ಸಾರ್ವಜನಿಕರ ಆಸ್ತಿ ಹಕ್ಕುಗಳ ಸಮಸ್ಯೆಗೆ ಶಾಶ್ವತ ಮುಕ್ತಿ ಸಿಗಲಿದೆ.

3. 2,500 ಚದರ ಅಡಿವರೆಗಿನ ಮನೆಗಳಿಗೆ ಒಸಿ (ಔಅ) ವಿನಾಯಿತಿ! ಸ್ವಂತ ಮನೆ ನಿರ್ಮಿಸುವ ಮಧ್ಯಮ ವರ್ಗದ ಜನರಿಗೆ ಸರ್ಕಾರ ದೊಡ್ಡ ರಿಲೀಫ್ ನೀಡಿದೆ. 2,500 ಚದರ ಅಡಿ ವಿಸ್ತೀರ್ಣದವರೆಗೆ ಕಟ್ಟಡ ನಿರ್ಮಿಸಿ ಅರ್ಜಿ ಹಾಕಿದವರಿಗೆ ಆಕ್ಯುಪೆನ್ಸಿ ಸರ್ಟಿಫಿಕೇಟ್ (ಔಅ) ನಿಯಮದಿಂದ ಸಂಪೂರ್ಣ ವಿನಾಯಿತಿ ನೀಡಲಾಗುವುದು ಎಂದು ತಿಳಿಸಲಾಗಿದೆ.

4. ರಸ್ತೆಗಳ ನಿರ್ಮಾಣಕ್ಕೆ 2,000 ಕೋಟಿ ರೂ. ಬಂಪರ್ ಅನುದಾನರಾಜ್ಯದ ಮೂಲಸೌಕರ್ಯ ಹಾಗೂ ಕನೆಕ್ಟಿವಿಟಿಗೆ ಹೆಚ್ಚಿನ ಒತ್ತು ನೀಡಿರುವ ಸಿಎಂ ಡಿ.ಕೆ. ಶಿವಕುಮಾರ್, ಭಾರಿ ಮೊತ್ತದ 2,000 ಕೋಟಿ ರೂಪಾಯಿಗಳ ವಿಶೇಷ ಅನುದಾನವನ್ನು ಘೋಷಿಸಿದ್ದಾರೆ.

5. ನಿರುದ್ಯೋಗಿಗಳಿಗೆ 'ಪ್ರೈವೇಟ್ ಎಂಪ್ಲಾಯ್ಮೆಂಟ್ ಎಕ್ಸ್ಚೇಂಜ್ ಸೆಂಟರ್'ಉದ್ಯೋಗದ ಸಮಸ್ಯೆ ನಿವಾರಿಸಲು ಮತ್ತು ಖಾಸಗಿ ಸಂಸ್ಥೆಗಳಲ್ಲಿ ಕೆಲಸ ಹುಡುಕುತ್ತಿರುವ ಯುವಜನರಿಗೆ ನೆರವಾಗಲು ಸರ್ಕಾರ ಹೊಸ ತಂತ್ರಜ್ಞಾನ ಆಧಾರಿತ ವ್ಯವಸ್ಥೆ ತರಲಿದೆ.

6. ಪ್ರತಿ ಪಂಚಾಯತ್‌ನಲ್ಲೂ 'ಭಾರತ್ ಜೋಡೋ ಯುವಕ ಸಂಘ'ರಾಜ್ಯದ ಗ್ರಾಮೀಣ ಭಾಗದ ಯುವಶಕ್ತಿಯನ್ನು ಸಮಾಜಮುಖಿ ಕಾರ್ಯಗಳಲ್ಲಿ ಸಂಘಟಿಸುವ ಸಲುವಾಗಿ, ರಾಜ್ಯದ ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲೂ 'ಭಾರತ್ ಜೋಡೋ ಯುವಕ ಸಂಘ'ಗಳನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ. ಈ ಯೋಜನೆಗಾಗಿ ಪ್ರತಿ ಪಂಚಾಯತ್‌ಗೆ 10,000 ರೂಪಾಯಿ ಘೋಷಣೆ ಮಾಡಲಾಗಿದೆ.

ಅಧಿಕಾರ ವಹಿಸಿಕೊಂಡ ಮೊದಲ ಸಚಿವ ಸಂಪುಟ ಸಭೆಯಲ್ಲೇ ವಿದ್ಯಾರ್ಥಿಗಳು, ಯುವಕರು ಮತ್ತು ಆಸ್ತಿ ಮಾಲೀಕರ ಸುದೀರ್ಘ ಕಾಲದ ಬೇಡಿಕೆಗಳಿಗೆ ಸ್ಪಂದಿಸುವ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಸರ್ಕಾರವು ಭರವಸೆಯ ಮುನ್ನುಡಿ ಬರೆದಿದೆ.

# ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ: ಕಾಂಗ್ರೆಸ್ ಕಾರ್ಯಕರ್ತರ ಸಂಭ್ರಮಾಚರಣೆ

ಸೂರ್ಯಪ್ರಗತಿ ನ್ಯೂಸ್.ಕಾಂ



ಶಿರಾ : ರಾಜ್ಯ ರಾಜಕಾರಣದಲ್ಲೇ ' 'ಟ್ರಬಲ್ ಶೂಟರ್' ಎಂದೇ ಖ್ಯಾತಿ ಪಡೆದಿರುವ ಕಾರ್ಯಕರ್ತರ ನೆಚ್ಚಿನ ನಾಯಕ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾದ ಡಿ. ಕೆ. ಶಿವಕುಮಾರ್ ಅವರು ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿರುವುದು ಪಕ್ಷದ ಕಾರ್ಯಕರ್ತರಿಗೆ ಹಾಗೂ ಅಪಾರ ಬೆಂಬಲಿಗರಿಗೆ ಸಂತಸತಂದಿದೇ ಎಂದು ಶಿರಾ ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ರೂಪೇಶ್ ಕೃಷ್ಣಯ್ಯ ಹರ್ಷ ವ್ಯಕ್ತಪಡಿಸಿ ಮಾತನಾಡಿದರು. ನಗರದ ಅಂಬೇಡ್ಕರ್ ವೃತ್ತದಲ್ಲಿ ಪಕ್ಷದ ಕಾರ್ಯಕರ್ತರು ಹಮ್ಮಿಕೊಳ್ಳಲಾಗಿದ್ದ ಸಂಭ್ರಮಾಚಾರಣೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ನೂತನ ಮುಖ್ಯಮಂತ್ರಿಯಾದ ಡಿ. ಕೆ. ಶಿವಕುಮಾರ್ ಅವರು ರಾಜ್ಯದ ಹಿರಿಯ ನಾಯಕ ಮಾಜಿ ಸಿ. ಎಂ. ಸಿದ್ದರಾಮಯ್ಯನವರ ಹಾಗೂ ಪ್ರಮುಖ ನಾಯಕರ ಅನುಭವ ಹಾಗೂ ಮಾರ್ಗದರ್ಶನದಲ್ಲಿ ಈ ಮುಂದಿನ ಎರಡು ವರ್ಷಗಳ ಅವಧಿಯಲ್ಲಿ ರಾಜ್ಯದ ಜನತೆಗೆ ಪಾರದರ್ಶಕ ಆಡಳಿತವನ್ನು ನೀಡಿ ದೇಶದಲ್ಲೇ ಕರ್ನಾಟಕ ಸರ್ಕಾರ ಮಾದರಿ ಸರ್ಕಾರವನ್ನಾಗಿ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಯುವ ಕಾಂಗ್ರೆಸ್ ನಗರಾಧ್ಯಕ್ಷ ಅಂಜನ್ ಕುಮಾರ್ ಮಾತನಾಡಿ ; ಸಾಮಾನ್ಯ ಕಾರ್ಯಕರ್ತನಾಗಿ ಬೆಳೆದು ಬಂದ ಡಿ.ಕೆ. ಶಿವಕುಮಾರ್ ಅವರು ನಂತರದ ಬಳಿಕ ಎನ್. ಎಸ್.ಯು.ಐ. ಘಟಕದ ಅಧ್ಯಕ್ಷರಾಗಿ, ಯುವ ಕಾಂಗ್ರೆಸ್ ನಾಯಕರಾಗಿ, ಕೆ. ಪಿ. ಸಿ. ಸಿ. ಅಧ್ಯಕ್ಷರಾಗಿ, ಶಾಸಕರಾಗಿ, ಮಂತ್ರಿಯಾಗಿ ಈಗೆ ಹಲವು ಉನ್ನತ ಹುದ್ದೆಗಳನ್ನು ಅಲಂಕರಿಸಿ ಯುವ ಸಮೂಹಕ್ಕೆ ಮಾದರಿಯಾಗಿದ್ದಾರೆ, ಇಂದು ಅವರು ರಾಜ್ಯದ ನೂತನ ಮುಖ್ಯಮಂತ್ರಿಯಾಗಿರುವುದು ನಮ್ಮೆಲ್ಲರಿಗೂ ಸಂತಸತಂದಿದ್ದು ಇದೇ ಸಂದರ್ಭದಲ್ಲಿ ನಮ್ಮ ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗಳಿಗೆ ಶಿರಾ ಕ್ಷೇತ್ರದ ಶಾಸಕರು, ಪಕ್ಷದ ಹಿರಿಯ ನಾಯಕ ಟಿ .ಬಿ. ಜಯಚಂದ್ರ ಅವರಿಗೆ ಮುಂಬರುವ ದಿನಗಳಲ್ಲಿ (ಎರಡನೇ ಪಟ್ಟಿಯಲ್ಲಿ) ಸೂಕ್ತ ಹಾಗೂ ಪ್ರಬಲವಾದ ಮಂತ್ರಿ ಸ್ಥಾನವನ್ನು ನೀಡುವಂತೆ ತಾಲ್ಲೂಕಿನ ಸಮಸ್ತ ಕಾರ್ಯಕರ್ತರ ಪರವಾಗಿ ಒತ್ತಾಯಿಸಿದರು.

ಅಂತಿಮವಾಗಿ, ಅಸ್ತಿತ್ವಕ್ಕೆ ಬಂದಿರುವ ನೂತನ ಕಾಂಗ್ರೆಸ್ ಸರ್ಕಾರಕ್ಕೆ ಸಮಸ್ತ ಶಿರಾ ತಾಲ್ಲೂಕಿನ ಕಾರ್ಯಕರ್ತರ ಪರವಾಗಿ ಶುಭ ಹಾರೈಸುವ ಮೂಲಕ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಗ್ರಾಮಾಂತರ ಯುವ ಕಾಂಗ್ರೆಸ್ ಅಧ್ಯಕ್ಷ ಹೇಮಂತ್ ಗೌಡ, ತಿಪ್ಪೇಸ್ವಾಮಿ, ಕಾಂಗ್ರೆಸ್ ಕಾರ್ಯಕರ್ತರು, ಯುವ ಕಾಂಗ್ರೆಸ್ ಹಾಗೂ ಎನ್.ಎಸ್.ಯು.ಐ ಸದಸ್ಯರು ಸೇರಿದಂತೆ ಅಭಿಮಾನಿಗಳು ಉಪಸ್ಥಿತರಿದ್ದರು.

# ಸ್ನಾತಕೋತ್ತರ ಭೌತ ಶಾಸ್ತ್ರದಲ್ಲಿ ಪ್ರಥಮ ರ್‍ಯಾಂಕ್ :ರೇವತಿ.ಜಿ ಗೆ ಚಿನ್ನದ ಪದಕ

ಸೂರ್ಯಪ್ರಗತಿ ನ್ಯೂಸ್.ಕಾಂ



ತುಮಕೂರು ವಿಶ್ವವಿದ್ಯಾಲಯದ ಎಂ.ಎಸ್.ಸಿ ಭೌತಶಾಸ್ತ್ರ ವಿಭಾಗದಲ್ಲಿ 91.14 % ಪಡೆದು ಪ್ರಥಮ ರ್‍ಯಾಂಕ್ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿನಿ ರೇವತಿ ಜಿ ಅವರಿಗೆ ಕರ್ನಾಟಕದ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಚಿನ್ನದ ಪದಕ ಪ್ರದಾನ ಮಾಡಿ ಗೌರವಿಸಿದರು.




ನಡೆದ ಘಟಿಕೋತ್ಸವ ಸಮಾರಂಭದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ರೇವತಿ ಜಿ ಅವರಿಗೆ ಪ್ರಮಾಣ ಪತ್ರ ನೀಡಿ ಅಭಿನಂದಿಸಿದರು.

ತುಮಕೂರು ಜಿಲ್ಲೆಯ ತಿಪಟೂರು ತಾಲ್ಲೂಕಿನ ದಸರೀಘಟ್ಟ ಗ್ರಾಮದ ನಿವಾಸಿಯಾಗಿರುವ ರೇವತಿ ಜಿ ಅವರು ತಮ್ಮೂರಿನಲ್ಲಿಯೇ ಕನ್ನಡ ಮಾಧ್ಯಮದಲ್ಲಿ ಹತ್ತನೇ ತರಗತಿವರೆಗೆ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಪೂರ್ಣಗೊಳಿಸಿದ್ದಾರೆ. ಗ್ರಾಮೀಣ ಹಿನ್ನೆಲೆಯಿಂದ ಬಂದಿದ್ದರೂ ಪರಿಶ್ರಮ, ಆತ್ಮವಿಶ್ವಾಸ ಮತ್ತು ನಿರಂತರ ಅಧ್ಯಯನದ ಮೂಲಕ ಸ್ನಾತಕೋತ್ತರ ಪದವಿಯಲ್ಲಿ ಈ ಅಪೂರ್ವ ಸಾಧನೆಯನ್ನು ಮಾಡಿದ್ದಾರೆ.

ಇವರು ಗಂಗಾಧರ್ ಹಾಗೂ ಧನಲಕ್ಷ್ಮಿ ದಂಪತಿಯ ಪುತ್ರಿಯಾಗಿದ್ದು, ಸಹೋದರ ರಾಘವೇಂದ್ರ ಡಿ.ಜಿ ಅವರ ಪ್ರೋತ್ಸಾಹವೂ ಇವರ ಯಶಸ್ಸಿಗೆ ಬೆನ್ನೆಲುಬಾಗಿದೆ.

ರೇವತಿ ಜಿ ಅವರ ಈ ವಿಶಿಷ್ಟ ಸಾಧನೆಗೆ ಕುಟುಂಬದವರು, ಶಿಕ್ಷಕರು, ಸ್ನೇಹಿತರು ಹಾಗೂ ಊರಿನ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

ಮುಂದಿನ ದಿನಗಳಲ್ಲಿ ಭೌತ ಶಾಸ್ತ್ರದಲ್ಲಿ ಸಂಶೋಧನೆ ನಡೆಸಿ ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆ ಮಾಡುವ ಆಶಯವನ್ನು ರೇವತಿ ಜಿ ವ್ಯಕ್ತಪಡಿಸಿದ್ದಾರೆ.

# ಸಿಎಂ ಶಿವಕುಮಾರ್‌ಗೆ ಸಿಗದ ಸ್ವಾತಂತ್ರ್ಯ: ಶಾಸಕ ಸುರೇಶ್‌ಗೌಡ ಬೇಸರ

ಸೂರ್ಯಪ್ರಗತಿನ್ಯೂಸ್.ಕಾಂ





ತುಮಕೂರು: ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆಗಳು. ಅವರು ತಮ್ಮ ಎರಡು ವರ್ಷಗಳ ಆಡಳಿತ ಅವಧಿಯಲ್ಲಿ ಹೆಚ್ಚಿನ ಅಭಿವೃದ್ಧಿಗಾಗಿ ಮತ್ತು ಜನ ಕಲ್ಯಾಣಕ್ಕಾಗಿ ಕೆಲಸ ಮಾಡಲಿ ಎಂದು ಗ್ರಾಮಾಂತರ ಕ್ಷೇತ್ರ ಶಾಸಕ ಬಿ.ಸುರೇಶ್‌ಗೌಡ ಹಾರೈಸಿದ್ದಾರೆ.

ಆದರೆ ಇವತ್ತಿನ ಸಂಪುಟ ರಚನೆ ನೋಡಿದರೆ ಇದರಲ್ಲಿ ಶಿವಕುಮಾರ್ ಅವರ ಆಯ್ಕೆಯ ಒಬ್ಬ ಸಚಿವರೂ ಇರುವಂತೆ ಕಾಣುವುದಿಲ್ಲ. ಒಬ್ಬ ಹೊಸ ನಾಯಕ ಬಂದಾಗ ಅವರು ತನ್ನ ಆಯ್ಕೆಯ ಜನರನ್ನು ಇಟ್ಟುಕೊಂಡು ಆಡಳಿತ ಮಾಡಬೇಕು ಎಂದು ಬಯಸುವುದು ಸಹಜ. ಆದರೆ ಕಾಂಗ್ರೆಸ್ ಪಕ್ಷದಲ್ಲಿ ಅನೇಕ ಹಿತಾಸಕ್ತಿಗಳು ಅಸ್ತಿತ್ವದಲ್ಲಿ ಇರುವುದರಿಂದ ಅವರೆಲ್ಲರೂ ಸೇರಿ ಕೊಂಡು ಶಿವಕುಮಾರ್ ಅವರನ್ನು ಕಟ್ಟಿ ಹಾಕಿದಂತೆ ಭಾಸವಾಗುತ್ತದೆ ಎಂದು ಹೇಳಿದ್ದಾರೆ.

ಈ ಮೊದಲ ಸಂಪುಟದಲ್ಲಿ ಮಹಿಳೆಗೆ ಸ್ಥಾನ ಇಲ್ಲದೇ ಇರುವುದು ಕೂಡ ಎದ್ದು ಕಾಣುವ ಲೋಪ. ನಮ್ಮ ಪ್ರಧಾನಿ ನರೇಂದ್ರ ಮೋದಿಯವರು ಶೇಕಡಾ 33 ರ ಮಹಿಳಾ ಮೀಸಲಾತಿ ಮಸೂದೆ ಮಂಡಿಸಿದ್ದಾಗ ಅದನ್ನು ಸೋಲಿಸಿದ ಕಾಂಗ್ರೆಸ್ ನ ಮಹಿಳಾ ವಿರೋಧಿ ನೀತಿ ಇಲ್ಲಿಯೂ ಮುಂದುವರಿದಿದೆ. ಶಿವಕುಮಾರ್ ಅವರ ಸಂಪುಟದಲ್ಲಿ ಡಾ.ಯತೀಂದ್ರ ಅವರನು ಬಿಟ್ಟರೆ ಯಾವುದೇ ಹೊಸ ಮುಖ ಇಲ್ಲ. ಯತೀಂದ್ರ ಅವರ ಸೇರ್ಪಡೆಗೆಯಾವ ಮಾನದಂಡ ಎಂದು ಹೆಚ್ಚು ಯೋಚಿಸ ಬೇಕಾದ ಅಗತ್ಯವಿಲ್ಲ. ಮುಖ್ಯಮಂತ್ರಿಯಾಗಲು ದೊಡ್ಡ ತಪಸ್ಸನ್ನೇ ಮಾಡಬೇಕಾಗಿ ಬಂದ ಶಿವಕುಮಾರ್ ಅವರು ಈಗ ಹೊಸ ಬಾಟಲಿಯಲ್ಲಿ ಹಳೆಯ ಮದ್ಯ ಇಟ್ಟು ಕೊಂಡು ಹೇಗೆ ರಾಜ್ಯಕ್ಕೆ ದಕ್ಷ ಮತ್ತು ಪ್ರಾಮಾಣಿಕ ಆಡಳಿತ ಕೊಡುತ್ತಾರೆ ತಿಳಿಯದು. ಈ ಸಂಪುಟ ರಚನೆಯಲ್ಲಿ ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕಾರ ಮಾಡಿರುವ ಡಾ.ಜಿ.ಪರಮೇಶ್ವರ್ ಅವರಿಗೆ ಅವರ ಸಾಮರ್ಥ್ಯಕ್ಕೆ ತಕ್ಕ ಖಾತೆ ದೊರೆತು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅವರು ಶ್ರಮಿಸುವಂತೆ ಆಗಲಿ ಎಂದು ಸುರೇಶ್ ಗೌಡರು ತಿಳಿಸಿದ್ದಾರೆ.






# "ಡಿ ಕೆ ಶಿವಕುಮಾರ್ ಸಿಎಂ ಆಗಿ ಪ್ರಮಾಣ ವಚನ ಎಂ.ಎಂ. ರವೀಶ್ ಅಭಿಮಾನಿ ಬಳಗದಿಂದ ಅದ್ದೂರಿ ಸಿಹಿ ವಿತರಣೆ.

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು: ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಕೆಪಿಸಿಸಿ ಅಧ್ಯಕ್ಷರಾದ ಡಿ.ಕೆ. ಶಿವಕುಮಾರ್ ಅವರು ಇಂದು ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ, ಮಾದಿಹಳ್ಳಿಯ 'ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗ'ದ ವತಿಯಿಂದ ಬೃಹತ್ ವಿಜಯೋತ್ಸವ ಹಾಗೂ ಸಿಹಿ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಮಾದಿಹಳ್ಳಿಯ ಡಿ.ಕೆ. ಶಿವಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷರಾದ ಎಂ.ಎಂ. ರವೀಶ್ ಅವರ ನೇತೃತ್ವದಲ್ಲಿ ಜಮಾಯಿಸಿದ ನೂರಾರು ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು, ಡಿ.ಕೆ. ಶಿವಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಜಯಘೋಷಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ ಸಂಭ್ರಮಿಸಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರಿಗೆ ಹಾಗೂ ಹಾದಿಹೋಕರಿಗೆ ಸಿಹಿ ಹಂಚಿ ಸಂತಸ ಹಂಚಿಕೊಳ್ಳಲಾಯಿತು.ಈ ವೇಳೆ ಮಾತನಾಡಿದ ಅಭಿಮಾನಿ ಬಳಗದ ಅಧ್ಯಕ್ಷ ಎಂ.ಎಂ. ರವೀಶ್ ಮಾತನಾಡಿಕಳೆದ ಹಲವು ವರ್ಷಗಳಿಂದ ಡಿ.ಕೆ. ಶಿವಕುಮಾರ್ ಅವರು ಪಕ್ಷಕ್ಕಾಗಿ ಮತ್ತು ರಾಜ್ಯದ ಜನರಿಗಾಗಿ ಪಟ್ಟ ಶ್ರಮಕ್ಕೆ ಇಂದು ತಕ್ಕ ಪ್ರತಿಫಲ ಸಿಕ್ಕಿದೆ. ಅವರು ರಾಜ್ಯದ ಮುಖ್ಯಮಂತ್ರಿಯಾಗಬೇಕೆನ್ನುವುದು ಕೋಟ್ಯಂತರ ಅಭಿಮಾನಿಗಳ ಹಾಗೂ ಕನ್ನಡಿಗರ ಕನಸಾಗಿತ್ತು. ಇಂದು ಆ ಕನಸು ನನಸಾಗಿದೆ. ಅವರ ಸಮರ್ಥ ನಾಯಕತ್ವದಲ್ಲಿ ಕರ್ನಾಟಕ ರಾಜ್ಯವು ಅಭಿವೃದ್ಧಿಯ ಪಥದಲ್ಲಿ ಮತ್ತಷ್ಟು ಮುನ್ನಡೆಯಲಿದೆ ಎಂಬ ಬಲವಾದ ನಂಬಿಕೆ ನಮಗಿದೆ. ಮಾದಿಹಳ್ಳಿಯ ಸಮಸ್ತ ಜನತೆಯ ಪರವಾಗಿ ನಮ್ಮ ನೆಚ್ಚಿನ ನಾಯಕರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇವೆ. ಕಾರ್ಯಕ್ರಮದಲ್ಲಿ ಮಾದಿಹಳ್ಳಿ ಅಭಿಮಾನಿ

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ, ಕ್ರೀಡಾ, ಎನ್.ಎಸ್.ಎಸ್, ಕಾರ್ಯಕ್ರಮ



ಮಧುಗಿರಿ ತಾಲ್ಲೂಕು ದೊಡ್ಡೇರಿ ಹೋಬಳಿಯ ಬಡವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ, ಕ್ರೀಡಾ, ಎನ್.ಎಸ್.ಎಸ್, ಯುವ ರೆಡ್ ಕ್ರಾಸ್, ಸ್ಕೌಟ್ ಮತ್ತು ಗೈಡ್ಸ್, ಐ.ಕ್ಯೂ.ಎ.ಸಿ, ಹಾಗೂ ವಿವಿಧ ಚಟುವಟಿಕೆ ಸಮಾರಂಭ ಹಾಗೂ ತೃತೀಯ ವರ್ಷದ ಬಿ.ಎ. ಮತ್ತು ಬಿ.ಕಾಂ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಶಾಸಕ ಕೆ.ಎನ್.ರಾಜಣ್ಣ ಭಾಗವಹಿಸಿ ಸಭೆಯನ್ನು ಕುರಿತು ಮಾತನಾಡಿದರು.

ಹಾಗೂ ಇದೇ ಸಂದರ್ಭದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಸಭೆಯಲ್ಲಿ ಭಾಗವಹಿಸಿ ಹಲವು ವಿಚಾರಗಳ ಬಗ್ಗೆ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿಯಾದ ಗೊಟೂರು ಶಿವಪ್ಪನವರು, ಪ್ರಾಂಶುಪಾಲರಾದ ಎಂ.ರಾಮಚಂದ್ರಯ್ಯನವರು, ನಿವೃತ್ತ ಪ್ರಾಂಶುಪಾಲರಾದ ಜಗದೀಶ್ ಅವರು, ಡಿ.ವೈ. ಎಸ್.ಪಿ ಮಂಜುನಾಥ್ ಅವರು, ಪುರಸಭೆ ಮಾಜಿ ಅಧ್ಯಕ್ಷರಾದ ನಂಜುಂಡಯ್ಯನವರು, ಬಡವನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಭಾನುಪ್ರೀಯ ನಾಗರಾಜು ಅವರು, ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ನಾಗೇಶ್ ಬಾಬುರವರು, ಹರ್ಷ ಆರ್.ಕುರುಬರಹಳ್ಳಿ ಅವರು ಕಾಲೇಜು ಅಭಿವೃದ್ಧಿ ಸಮಿತಿ ಪದಾಧಿಕಾರಿಗಳು, ಸ್ಥಳೀಯ ಮುಖಂಡರುಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಅಭಿಮಾನಿಗಳು, ಕಾರ್ಯಕರ್ತರು , ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . CONTACT : 9901010109 GMAIL: suryapragathi2021@gmail.com.